ಕನ್ನಡ ದಿನಪತ್ರಿಕೆ
08 ಮಾರ್ಚ್ | ಶುಕ್ರವಾರ
08 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 18 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಸವದಿಗೆ ಟಾಸ್ಕ್ ಜೊತೆಗೆ ಆಫರ್ ಕೊಟ್ಟ ಕಾಂಗ್ರೆಸ್



ಬೆಳಗಾವಿ: ಲೋಕಸಭಾ ಚುನಾವಣೆಗೆ ದಿನಗಣನೆ ಶುರುವಾಗಿದೆ. ಚಿಕ್ಕೋಡಿ ಅಖಾಡವನ್ನು ಗೆಲ್ಲಲು ಕಾಂಗ್ರೆಸ್ ಸ್ಪೆಷಲ್ ರಣತಂತ್ರ ಹೆಣೆದಿದೆ. ಚಿಕ್ಕೋಡಿ ಕ್ಷೇತ್ರ ಗೆಲ್ಲಲು ಲಕ್ಷ್ಮಣ ಸವದಿಗೆ ಸ್ಪೆಷಲ್ ಟಾಸ್ಕ್ ನೀಡಿ ಆಫರ್ ಒಂದನ್ನು ನೀಡಿದೆ.

ಲೋಕಸಭಾ ಚುನಾವಣೆಯಲ್ಲಿ ಹೆಚ್ಚಿನ ಸ್ಥಾನಗಳನ್ನು ಗೆಲ್ಲಲು ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಈಗಿನಿಂದಲೇ ರಣತಂತ್ರ ರೂಪಿಸಲು ಆರಂಭಿಸಿದ್ದಾರೆ. ಬೆಳಗಾವಿ ಹಾಗೂ ಚಿಕ್ಕೋಡಿ ಎರಡು ಕ್ಷೇತ್ರಗಳಲ್ಲೂ ಕಾಂಗ್ರೆಸ್ ಅಭ್ಯರ್ಥಿಗಳನ್ನ ಶತಾಯ ಗತಾಯ ಗೆಲ್ಲಿಸಲು ಮುಂದಾಗಿದ್ದಾರೆ.

ಬೆಳಗಾವಿಯ ಅಥಣಿ ತಾಲೂಕಿನ ಕೊಟ್ಟಲಗಿ ಗ್ರಾಮದ 1,480 ಕೋಟಿ ರೂ ಮೊತ್ತದ ಅಮ್ಮಾಜೇಶ್ವರಿ ಏತ ನೀರಾವರಿಗೆ ಸಿಎಂ ಚಾಲನೆ ನೀಡಿದರು. ಇದರ ಬೆನ್ನಲ್ಲೇ ಚಿಕ್ಕೋಡಿ ಲೋಕಸಭೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಿಸಿದರೆ ಲಕ್ಷ್ಮಣ ಸವದಿಗೆ ಮಂತ್ರಿಗಿರಿ ಫಿಕ್ಸ್ ಎಂದು ಡಿಕೆಶಿ ಭರವಸೆ ನೀಡುವುದರ ಜೊತೆಗೆ ಕಾಂಗ್ರೆಸ್ ಗೆಲ್ಲಿಸುವ ಟಾಸ್ಕ್ ನೀಡಿದ್ದಾರೆ.

ಅಲ್ಲದೇ ಮುಂದಿನ ದಿನದಲ್ಲಿ ಶಾಸಕ ಲಕ್ಷ್ಮಣ ಸವದಿಗೆ ಭವಿಷ್ಯವಿದೆ ಎನ್ನುವ ಮೂಲಕ ಸಿಎಂ ಸಿದ್ದರಾಮಯ್ಯ ಸವದಿಗೆ ಮಂತ್ರಿಗಿರಿ ನೀಡುವ ಮುನ್ಸೂಚನೆ ನೀಡಿದ್ದಾರೆ.


## ಬೆಳಗಾವಿಗೆ ಗಿಫ್ಟ್ ಕೊಟ್ಟ ಕೇಂದ್ರ ಸಚಿವ ನಿತಿನ್ ಗಡ್ಕರಿ



ಬೆಳಗಾವಿ: ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ರಾಷ್ಟ್ರೀಯ ಹೆದ್ದಾರಿ–748ಎ ನ ಬೆಳಗಾವಿ–ಹುನಗುಂದ–ರಾಚೂರು ವಿಭಾಗದ ಚತುಷ್ಪಥ ರಸ್ತೆ ಅಭಿವೃದ್ಧಿಗೆ 2,675.31 ಕೋಟಿ ರೂ.ಬಿಡುಗಡೆ ಮಾಡಿರುವುದಾಗಿ ಕೇಂದ್ರ ಭೂ ಸಾರಿಗೆ ಸಚಿವ ನಿತಿನ್ ಗಡ್ಕರಿ ತಿಳಿಸಿದ್ದಾರೆ.

ದೆಹಲಿಯಲ್ಲಿ ಈ ಬಗ್ಗೆ ಅವರು ಮಾಹಿತಿ ನೀಡಿದ್ದಾರೆ. ಇದು ಈ ಭಾಗಗಳನ್ನು ಸಂಪರ್ಕಿಸುವ ಅತ್ಯಂತ ಪ್ರಾಮುಖ್ಯ ರಾಷ್ಟ್ರೀಯ ಹೆದ್ದಾರಿಯಾಗಿದೆ. ಈ ಹಿನ್ನಲೆಯಲ್ಲಿ ಕೇಂದ್ರ ಸರಕಾರ ಇದೀಗ ಇದಕ್ಕೆ ಬೇಕಾದ ಹಣವನ್ನು ಬಿಡುಗಡೆ ಮಾಡಿದೆ. ಸಚಿವ ನಿತಿನ್ ಗಡ್ಕರಿ ಅವರು ಕಳೆದ ವಾರ ಬೆಳಗಾವಿಗೆ ಭೇಟಿ ನೀಡಿ ಮಹತ್ವದ ಯೋಜನೆಗಳಿಗೆ ಚಾಲನೆ ನೀಡಿದ್ದನ್ನು ಇಲ್ಲಿ ನೆನಪಿಸಬಹುದು.

## ಜಾತ್ರೆಗೆ ಬಂದಿದ್ದ ವಿದ್ಯಾರ್ಥಿನಿಯನ್ನು ಎಳೆದೊಯ್ದು ಗ್ಯಾಂಗ್ ರೇಪ್: ಮೂವರ ಬಂಧನ



ತುಮಕೂರು: ಗೆಳೆಯನೊಂದಿಗೆ ಜಾತ್ರೆಗೆ ಬಂದ ವಿದ್ಯಾರ್ಥಿನಿ ಬ್ಲಾಕ್ ಮೇಲ್ ಮಾಡಿ ಸಾಮೂಹಿಕ ಅತ್ಯಾಚಾರ ಎಸಗಿದ ಘಟನೆ ತಡವಾಗಿ ಬೆಳಕಿಗೆ ಬಂದಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರನ್ನು ಬಂಧಿಸಲಾಗಿದೆ.

ಬಂಡೆಪಾಳ್ಯದಲ್ಲಿ ವಾಸವಾಗಿದ್ದ ಬಾಗಲಕೋಟೆ ಮೂಲಕ ಅಮೋಘ(220, ಹನುಮಂತ(22), ಪ್ರತಾಪ್(20) ಬಂಧಿತ ಆರೋಪಿಗಳು.

ಸ್ನೇಹಿತನೊಂದಿಗೆ ಸಿದ್ದಗಂಗಾ ಮಠದ ಕೆಲಸಕ್ಕೆ ಬಂದಿದ್ದ ಪಿಯುಸಿ ವಿದ್ಯಾರ್ಥಿನಿ ಬೆಟ್ಟಕ್ಕೆ ಹೋಗುವ ದಾರಿಯಲ್ಲಿ ಕುಳಿತಿದ್ದಾಗ ಆರೋಪಿಗಳು ಮೊಬೈಲ್ ನಲ್ಲಿ ವಿಡಿಯೋ ಮಾಡಿಕೊಂಡಿದ್ದಾರೆ.

ಜಾಲತಾಣದಲ್ಲಿ ವಿಡಿಯೋ ಹರಿಬಿಡುವುದಾಗಿ ಬೆದರಿಸಿ ಬಳಿಕ ಬಾಲಕಿಯನ್ನು ರೂಮ್ ಗೆ ಕರೆದುಕೊಂಡು ಹೋಗಿ ಅತ್ಯಾಚಾರ ಎಸಗಿದ್ದಾರೆ. ನಂತರ ಬಾಲಕಿಯನ್ನು ಮಠದ ಬಳಿ ಬಿಟ್ಟು ಹೋಗಿದ್ದಾರೆ. ಬಾಲಕಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದು, ಆಕೆಯ ಹೇಳಿಕೆ ಆಧರಿಸಿ ಮಹಿಳಾ ಠಾಣೆ ಪೊಲೀಸರು ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಆರೋಪಿಗಳನ್ನು ಬಂಧಿಸಿದ್ದಾರೆ.

## ಜಿಲ್ಲಾ ಕೆಡಿಪಿ ಸಮಿತಿಗೆ ಬಸವರಾಜ ಕೋಳಿ ನೇಮಕ



ಹುಕ್ಕೇರಿ: ತಾಲೂಕಿನ ಅಮ್ಮಿನಭಾಂವಿ ಗ್ರಾಮದ ಬಸವರಾಜ ಕೋಳಿ ಅವರನ್ನು ಬೆಳಗಾವಿ ಜಿಲ್ಲಾ ಮಟ್ಟದ ಪರಿಶೀಲನಾ ಕೆಡಿಪಿ ಸಮಿತಿಗೆ ಅಧಿಕಾರೇತರ ನಾಮನಿರ್ದೇಶನ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ.

ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನದ ಪರಿಶೀಲನೆಗಾಗಿ ರಚಿಸಿರುವ ಈ ಕೆಡಿಪಿ ಸಮಿತಿಗೆ ಬಸವರಾಜ ಕೋಳಿ ಅವರನ್ನು ಯೋಜನೆ ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಮಲ್ಲಿನಾಥ ಅವರು ಬುಧವಾರ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ, ಮಾಜಿ ಸಚಿವ ಎ.ಬಿ.ಪಾಟೀಲ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಮಹಾವೀರ ಮೋಹಿತೆ, ಕಾಂಗ್ರೆಸ್ ಜಿಲ್ಲಾ ಅಧ್ಯಕ್ಷ ಚಿಂಗಳೆ, ಬ್ಲಾಕ್ ಅಧ್ಯಕ್ಷರಾದ ವಿಜಯ ರವದಿ, ಸಂತೋಷ ಮುಡಸಿ ಮಾರ್ಗದರ್ಶನದಲ್ಲಿ ಬಸವರಾಜ ಕೋಳಿ ಅವರನ್ನು ನೇಮಕ ಮಾಡಲಾಗಿದೆ.

ಮುಖಂಡರಾದ ಇಲಿಯಾಸ ಇನಾಮದಾರ, ಕಿರಣ ರಜಪೂತ, ಮಲ್ಲಿಕಾರ್ಜುನ ರಾಶಿಂಗೆ, ಶಾನೂಲ್ ತಹಶೀಲದಾರ, ದಿಲೀಪ ಹೊಸಮನಿ, ಸುರೇಶ ಹುಣಶ್ಯಾಳಿ, ಕಲ್ಲಪ್ಪ ಕಟ್ಟಿ, ಅವಿನಾಶ ನಲವಡೆ, ರಾಜು ಕಮತೆ ಸೇರಿದಂತೆ ಮತ್ತಿತರರು ಬಸವರಾಜ ಕೋಳಿ ನೇಮಕ್ಕೆ ಹರ್ಷ ವ್ಯಕ್ತಪಡಿಸಿದ್ದಾರೆ.

# ವಿ.ಟಿ.ಯು 23ನೇ ಘಟಿಕೋತ್ಸವ ಭಾಗ–2

## ವಿಜ್ಞಾನ, ತಂತ್ರಜ್ಞಾನ ಬೆಳವಣಿಗೆ ಮೂಲಕ ಭಾರತ ಪ್ರಗತಿಪರ ರಾಷ್ಟ್ರವಾಗಿದೆ: ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

ಬೆಳಗಾವಿ: ಭವಿಷ್ಯದಲ್ಲಿ ಭಾರತ ವಿಶ್ವದ ಎಲ್ಲ ದೇಶಗಳಲ್ಲಿ ಮುಂಚೂಣಿಯ ರಾಷ್ಟ್ರವಾಗಲಿದೆ. ಡಿಜಿಟಲ್ ತಂತ್ರಜ್ಞಾನ ಆವಿಷ್ಕಾರಗಳ ಮೂಲಕ ಭಾರತ ಸಾಕಷ್ಟು ಪ್ರಗತಿ ಹೊಂದುತ್ತಿದೆ. ಚಂದ್ರಯಾನ, ಮಂಗಳಯಾನ ಸೇರಿದಂತೆ ಭಾರತ ವಿಭಿನ್ನ ಸಾಧನೆ ತೋರುತ್ತಿದೆ. ತಂತ್ರಜ್ಞಾನ ಮತ್ತು ವಿಜ್ಞಾನದ ಬೆಳವಣಿಯಲ್ಲಿ ಭಾರತ ವಿಶ್ವದಲ್ಲಿ ದೇಶ ತನ್ನದೇಯಾದ ಛಾಪು ಮೂಡಿಸಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ತಿಳಿಸಿದರು.




ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಜ್ಞಾನಸಂಗಮ ಆವರಣದ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಸಭಾಂಗಣದಲ್ಲಿ ಗುರುವಾರ (ಮಾ.07) ನಡೆದ ವಿಟಿಯು 23ನೇ ಘಟಿಕೋತ್ಸವ ಭಾಗ –2 ರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಶ್ವೇಶ್ವರ ತಾಂತ್ರಿಕ ವಿಶ್ವವಿದ್ಯಾಲಯದ 600 ಕ್ಕೂ ಅಧಿಕ ವಿದ್ಯಾರ್ಥಿಗಳಿಗೆ ಪಿಹೆಚ್ ಡಿ ಪದವಿ ಪದಾನ ಮಾಡಲಾಗಿದೆ. ದೇಶ ನಮಗೆ ಎಲ್ಲವನ್ನೂ ಕೊಟ್ಟಿದೆ ಅದರಂತೆ ದೇಶಕ್ಕೆ ನಮ್ಮ ಕೊಡುಗೆಯ ಅಗತ್ಯವಿದೆ. ದೇಶವನ್ನು ಆತ್ಮನಿರ್ಭರ ಹಾಗೂ ಸರ್ವಶ್ರೇಷ್ಠ ಮಾಡಲು ಇಂದಿನ ವಿದ್ಯಾರ್ಥಿಗಳ ಸಹಕಾರ ಅವಶ್ಯಕತೆ ಇದೆ. ಔದ್ಯೋಗಿಕ ಕ್ಷೇತ್ರ ನಮ್ಮ ಕಲ್ಪನೆಗಿಂತಲೂ ಅತಿ ವೇಗವಾಗಿ ಬೆಳೆಯುತ್ತಿದೆ. ಇಂದಿನ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿ. ಸುಸ್ಥಿರ ದೇಶಕ್ಕಾಗಿ ನಿಮ್ಮ ಕೊಡುಗೆ ಬೇಕಿದೆ ಎಂದು ತಿಳಿಸಿದರು.

ಪದವಿ ಪಡೆದ ನಂತರ ನೀವು ದೇಶಕ್ಕೆ ಕೊಡುಗೆ ನೀಡಲು ಮುಂದಾಗಬೇಕು. ಪ್ರಸ್ತುತ ದಿನಮಾನಗಳಲ್ಲಿ ಭಾರತ ದೇಶ ಎಲ್ಲ ವಲಯಗಳಲ್ಲಿ ಬೆಳವಣಿಗೆ ಕಾಣುತ್ತಿದೆ. ಇದಕ್ಕೆ ಪೂರಕವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುವುದರ ಮೂಲಕ ಇತರ–ರಿಗೆ ಪ್ರೇರಣೆಯಾಗಬೇಕು.

ಭವಿಷ್ಯದ ಬಲಿಷ್ಠ ಭಾರತ ನಿರ್ಮಾಣ–ಕ್ಕೆ ನೀವೆಲ್ಲರೂ ನಿಮ್ಮ ನಿಮ್ಮ ಕ್ಷೇತ್ರಗಳಲ್ಲಿ ಸಾಧನೆ ಹೆಚ್ಚು ಒತ್ತು ನೀಡಬೇಕು. ನೀವು ಪಡೆದಂತಹ ಪದವಿ, ಚಿನ್ನದ ಪದಕಕ್ಕೆ ನಿಮ್ಮ ಸಾಧನೆಯ ಮೂಲಕ ಮುಂದಿನ 10 ವರ್ಷಗಳಲ್ಲಿ ಅದರ ಮೌಲ್ಯ ಹೆಚ್ಚಾಗಲಿದೆ. ಅದರಂತೆ ದೇಶದಲ್ಲಿ ಮಹಿಳೆಯರು ಸಹ ಎಲ್ಲ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ ಅವರ ಸಾಧನೆಗಳಿಗೆ ನಾವೆಲ್ಲರೂ ಬೆಂಬಲ ನೀಡಬೇಕು ಎಂದು ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ತಿಳಿಸಿದರು.

ಪದವಿ ಬಳಿಕ ಪ್ರಮಾಣ ಪತ್ರ ಪಡೆಯುವುದು ಮಾತ್ರವಲ್ಲದೇ ಕಲಿತ ಜ್ಞಾನದಿಂದ ಬಡ ಮತ್ತು ಮಧ್ಯಮ ಜನರ ಜೀವನಮಟ್ಟ ಸುಧಾರಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ದೊಡ್ಡ ದೊಡ್ಡ ಕಂಪನಿಗಳಿಗೆ ಸೇರುವುದಕ್ಕಿಂತ ಸ್ವಯಂ ಉದ್ಯೋಗ ಸೃಷ್ಟಿಯ ಮೂಲಕ ಉತ್ತಮ ವೃತ್ತಿಜೀವನ ಕಟ್ಟಿಕೊಳ್ಳಬೇಕು ಎಂದು ರಾಮನ್ಸ್ ಮ್ಯಾಗ್ಸಸ್ಸೇ ಹಾಗೂ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು ಮತ್ತು ಸೆಲ್ಕೋ ಫೌಂಡೇಶನ್ ಹಾಗೂ ಸೆಲ್ಕೋ ಇಂಡಿಯಾ ಸಹ ಸಂಸ್ಥಾಪಕ ಡಾ. ಹರೀಶ ಹಂದೆ ಅವರು ಹೇಳಿದರು.



### ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಪ್ರಧಾನ:


ಇದಕ್ಕೂ ಮುಂಚೆ ಬೆಂಗಳೂರಿನ ಸಿಎಂಆರ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಎಂಬಿಎ ವಿಭಾಗದ ವಿದ್ಯಾರ್ಥಿನಿ ಜಿ.ತನು 4 ಚಿನ್ನದ ಪದಕ, ಹುಬ್ಬಳ್ಳಿಯ ಕೆಎಲ್‌ಇ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಅಕ್ಷತಾ ನಾಯ್ಕ ಮತ್ತು ದಾವಣಗೆರೆಯ ಯುಬಿಡಿಟಿ ಕಾಲೇಜ್ ಆಫ್ ಎಂಜಿನಿಯರಿಂಗ್‌ನ ಎಂ.ಪೂಜಾ ತಲಾ 3 ಚಿನ್ನದ ಪದಕ, ಬೆಳಗಾವಿಯ ಎಸ್.ಜಿ.ಬಾಳೇಕುಂದ್ರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಕ್ರಾಂತಿ ಮೋರೆ, ಚಿಕ್ಕಮಗಳೂರಿನ ಆದಿಚುಂಚನ ಗಿರಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಎಚ್.ಪಿ.ಚೇತನ ಮತ್ತು ದಾವಣಗೆರೆಯ ಯುಬಿಡಿಟಿ ಕಾಲೇಜ್ ಆಫ್ ಎಂಜಿನಿಯರಿಂಗ್‌ನ ಎ.ಎಸ್.ನಿತ್ಯಾ ತಲಾ 2 ಚಿನ್ನದ ಪದಕ ವಿತ–ರಿಸಲಾಯಿತು.

ಕಳೆದ 25 ವರ್ಷಗಳಿಂದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲದಲ್ಲಿ ಪದವಿ ಪಡೆದ ಅನೇಕ ವಿದ್ಯಾರ್ಥಿಗಳು ಈಗ ಉನ್ನತ ಉದ್ಯೋಗದಲ್ಲಿದ್ದಾರೆ.

ಕಲಿಕೆ ಪದವಿಗಳಿಕೆಗೆ ಸೀಮಿತವಾಗದೇ, ಪದವಿ ಪಡೆದ ಬಳಿಕವೂ ಪ್ರತಿ ದಿನ ಹೊಸತನ್ನು ಕಲಿಯುತ್ತಾ ಇರಬೇಕು. ನಿರಂತರ ಕಲಿಕೆಯಿಂದ ಮಾತ್ರ ಹೊಸ ಆವಿಷ್ಕಾರಗಳು ಸಾಧ್ಯ ಎಂದು ಉನ್ನತ ಶಿಕ್ಷಣ ಇಲಾಖೆ ಸಚಿವ ಡಾ.ಎಂ ಸಿ ಸುಧಾಕರ ಅವರು ತಿಳಿಸಿದರು.

ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಕುಲಪತಿ ಪ್ರೊ. ಎಸ್. ವಿದ್ಯಾಶಂಕರ್ ಕುಲಸಚಿವರಾದ ಬಿ.ಇ ರಂಗಸ್ವಾಮಿ, ಮೌಲ್ಯ ಮಾಪನ ಕುಲಸಚಿವರಾದ ಟಿ.ಎನ್ ಶ್ರೀನಿವಾಸ ಉಪಸ್ಥಿತರಿದ್ದರು. ಬೋಧಕ–ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಪಾಲಕರು ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿದ್ದರು.

## ಕೆಫೆ ಬ್ಲಾಸ್ಟ್ ಮಾಡಿದ ಶಂಕಿತ ಉಗ್ರನ ಸುಳಿವು ಕೊಟ್ಟವರಿಗೆ 10 ಲಕ್ಷ ರೂ. ಬಹುಮಾನ ಘೋಷಣೆ



ಬೆಂಗಳೂರು: ರಾಮೇಶ್ವರಂ ಕೆಫೆ ಬ್ಲಾಸ್ಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಶಂಕಿತ ಉಗ್ರನ ಸುಳಿವು ಕೊಟ್ಟವರಿಗೆ 10 ಲಕ್ಷ ರೂ. ಬಹುಮಾನ ಘೋಷಣೆ ಮಾಡಲಾಗಿದೆ.

ಎನ್‌ಐಎಯಿಂದ 10 ಲಕ್ಷ ಬಹುಮಾನ ಘೋಷಣೆ ಮಾಡಿದ್ದು, ಶಂಕಿತನ ಸುಳಿವು ನೀಡಿದವರ ಹೆಸರು ಗೌಪ್ಯವಾಗಿ ಇಡುವುದಾಗಿ ಎನ್‌ಐಎ ತಿಳಿಸಿದೆ. ಶಂಕಿತ ಉಗ್ರನ ಸುಳಿವು ಸಿಕ್ಕಲ್ಲಿ 08029510900, 8904241100 ನಂಬರಿಗೆ ಕರೆ ಮಾಡುವಂತೆ ಸೂಚನೆ ನೀಡಲಾಗಿದೆ. ಎನ್‌ಐಎ ಟ್ವಿಟ್ಟರ್‌ನಲ್ಲಿಶಂಕಿತ ಬಾಂಬರ್‌ನ ಫೋಟೋ ರಿವೀಲ್ ಮಾಡಿದ್ದು, ರಾಮೇಶ್ವರಂ ಬಾಂಬ್ ಬ್ಲಾಸ್ಟ್ ರುವಾರಿಯ ಸುಳಿವು ನೀಡಿದವರಿಗೆ 10 ಲಕ್ಷ ನಗದು ಬಹುಮಾನ ನೀಡಲಾಗುತ್ತದೆ.

ಮುಖಕ್ಕೆ ಮಾಸ್ಕ್ ಇಲ್ಲದೇ ಇರುವ ಹತ್ತಿರದ ಫೋಟೋವೊಂದನ್ನು ಎನ್‌ಐಎ ರಿಲೀಸ್ ಮಾಡಿದೆ. ಎನ್‌ಐಎ ಇಂದ ಆರೋಪಿಗಾಗಿ ತೀವ್ರ ತಲಾಷ್ ನಡೆಯುತ್ತಿದೆ. ಇದುವರೆಗೂ ಆರೋಪಿ ಹೋಲುವ ಫೋಟೋ ಇರಲಿಲ್ಲ. ಎನ್‌ಐಎ ಬಿಡುಗಡೆ ಮಾಡಿರುವ ಫೋಟೋದಲ್ಲಿ ಅಲ್ಪ ಸ್ವಲ್ಪ ಮುಖ ಚಹರೆ ಪತ್ತೆಯಾಗಿದೆ.

## ನಮ್ಮನ್ನು ಕರ್ನಾಟಕಕ್ಕೆ ಸೇರಿಸಿಕೊಳ್ಳಿ ಎಂದ ಜತ್ತ ತಾಲೂಕಿನ ಕನ್ನಡಿಗರು

ಬೆಳಗಾವಿ: ಮಹಾರಾಷ್ಟ್ರದಲ್ಲಿ ಇದ್ದರೂ ಆಗಾಗ ಕರ್ನಾಟಕಕ್ಕೆ ಸೇರುತ್ತೇವೆ ಎಂದು ಹೋರಾಟ ನಡೆಸುತ್ತಿರುವ ಜತ್ತ ತಾಲೂಕಿನ ಕನ್ನಡಿಗರು ಇದೀಗ ಮತ್ತೊಮ್ಮೆ ತಾವು ಕರ್ನಾಟಕಕ್ಕೆ ಸೇರುವ ಅಭಿಲಾಷೆ ವ್ಯಕ್ತಪಡಿಸಿದ್ದಾರೆ. ಮಹಾರಾಷ್ಟ್ರದಲ್ಲಿದ್ದರೂ ಅನೇಕ ಮೂಲಸೌಲಭ್ಯ ಗಳಿಂದ ನಮ್ಮ ಗ್ರಾಮಗಳು ವಂಚಿತವಾಗಿವೆ.

ಹೀಗಾಗಿ ನಮ್ಮನ್ನು ಕರ್ನಾಟಕಕ್ಕೆ ಸೇರಿಸಿಕೊಳ್ಳಿ ಎಂದು ಮಹಾರಾಷ್ಟ್ರದ ಗಡಿ ಭಾಗದ ಜನರು ಅಥಣಿಯಲ್ಲಿ ಬುಧವಾರ ನಡೆದ ಕಾರ್ಯಕ್ರಮಕ್ಕೆ ಬಂದು ಆಗ್ರಹಿಸಿರುವುದು ಗಮನಸೆಳೆಯಿತು.

ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಕೊಟ್ಟಲಗಿಯಲ್ಲಿ ಬುಧವಾರ ನಡೆದ ಏತ ನೀರಾವರಿ ಯೋಜನೆಯ ಶಂಕುಸ್ಥಾಪನೆ ಸಮಾರಂಭಕ್ಕೆ ಮಹಾರಾಷ್ಟ್ರದ ಜತ್ತ ತಾಲೂಕಿನ ನೂರಾರು ಕನ್ನಡಿಗರು ನಾಮಫಲಕಗಳನ್ನು ಹಿಡಿದುಕೊಂಡು ಸಮಾರಂಭದಲ್ಲಿ ಭಾಗವಹಿಸಿದ್ದರು. ಗಡಿಭಾಗದ ಅನೇಕ ಹಳ್ಳಿಗಳು ನೀರಾವರಿ, ರಸ್ತೆ ಸುಧಾರಣೆ,




ಕನ್ನಡ ಶಾಲೆಗಳ ಸುಧಾರಣೆ, ಕುಡಿಯುವ ನೀರು ಸೇರಿದಂತೆ ಅನೇಕ ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿವೆ. ಆದ್ದರಿಂದ ನಮ್ಮನ್ನು ಕರ್ನಾಟಕಕ್ಕೆ ಸೇರಿಸಿಕೊಳ್ಳಬೇಕು. ಗಡಿ ಭಾಗದ ಕನ್ನಡ ಶಾಲೆಗಳಿಗೆ ವಿಶೇಷ ಅನುದಾನ ಒದಗಿಸಬೇಕು ಎಂದು ಆಗ್ರಹಿಸಿದರು. ಬೇಸಿಗೆ ಸಂದರ್ಭದಲ್ಲಿ ನಮಗೆ ಕುಡಿಯುವ ನೀರಿನ ಸಮಸ್ಯೆ ಇದ್ದು, ಕೊಟ್ಟಲಗಿ ಏತ ನೀರಾವರಿ ಯೋಜನೆ ಮೂಲಕ ನಮ್ಮ ಭಾಗದ ಕೆರೆಗಳಿಗೆ ನೀರು ತುಂಬಿಸಬೇಕು ಎಂಬ ಬೇಡಿಕೆಗಳನ್ನು ಅಥ–ಣಿ ಶಾಸಕ ಲಕ್ಷ್ಮಣ ಸವದಿ ಅವರಿಗೆ ಮನವಿ ಸಲ್ಲಿಸಿದರು. ಶಾಸಕ ಲಕ್ಷ್ಮಣ ಸವದಿ ಅವರು ತಮ್ಮ ಪ್ರಸ್ತಾವಿಕ ಭಾಷಣದಲ್ಲಿ ಗಡಿನಾಡಿನ ಕನ್ನಡಿಗರ ಸಮಸ್ಯೆ ಕುರಿತು ಪ್ರಸ್ತಾಪಿಸಿದಾಗ ಮಹಾರಾಷ್ಟ್ರದ ಜತ್ತ ತಾಲೂಕಿನ ನೂರಾರು ಕನ್ನಡಿಗರು ನಾಮಫಲಕಗಳನ್ನು ಕೈಯಲ್ಲಿ ಹಿಡಿದು ಎದ್ದು ನಿಂತು ಘೋಷಣೆಗಳನ್ನು ಕೂಗುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗಮನ ಸೆಳೆದರು. ಒಟ್ಟಾರೆ ಕರ್ನಾಟಕ ಸರಕಾರದ ಯೋಜನೆಗಳು ಮತ್ತು ಮಾತೃಭಾಷೆಯ ಕಾರಣಕ್ಕೆ ಗಡಿನಾಡ ಕನ್ನಡಿಗರು ಆಗಾಗ ತಾವು ಕರ್ನಾಟಕಕ್ಕೆ ಸೇರ್ಪಡೆಯಾಗುವ ಮನದ ಇಂಗಿತವನ್ನು ವ್ಯಕ್ತಪಡಿಸುತ್ತಿದ್ದಾರೆ. ಈ ವೇಳೆ ಮಾಜಿ ಸಚಿವ ವಿಶ್ವಜಿತ್ ಕದಂ, ಜತ್ತ ಶಾಸಕ ವಿಕ್ರಂ ಸಾವಂತ್, ಸ್ಥಳೀಯ ಮುಖಂಡರಾದ ಬಾಬು ಮಾಳಿ, ರಮೇಶ ಪಾಟೀಲ, ಎಂ.ಸಿರಗೊಂಡ, ನೀಲೇಶ ಬಾಮನೆ, ಸುಜಯ ಶಿಂಧೆ ಇತರರು ಇದ್ದರು. ನಿಯೋಗದಲ್ಲಿ ಕೆಲ ಗ್ರಾಮ ಪಂಚಾಯಿತಿಗಳ ಗ್ರಾಮದ ಮುಖ್ಯಸ್ಥರು ಹಾಗೂ ಸದಸ್ಯರಿದ್ದರು.

## 370ನೇ ವಿಧಿ ಬಗ್ಗೆ ಕಾಂಗ್ರೆಸ್, ಮಿತ್ರಪಕ್ಷಗಳು ಕಾಶ್ಮೀರ ಜನರ ದಾರಿ ತಪ್ಪಿಸುತ್ತಿವೆ

ಶ್ರೀನಗರ: 2019 ರಲ್ಲಿ 370ನೇ ವಿಧಿಯನ್ನು ರದ್ದುಗೊಳಿಸಿದ ನಂತರ ಮೊದಲ ಬಾರಿ ಜಮ್ಮು ಮತ್ತು ಕಾಶ್ಮೀರಕ್ಕೆ ಭೇಟಿ ನೀಡಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು ವಿಶೇಷ ಸ್ಥಾನಮಾನದ ಬಗ್ಗೆ ಕಾಶ್ಮೀರ ಜನರ ದಾರಿ ತಪ್ಪಿಸಿದ್ದವು ಎಂದು ಗುರುವಾರ ಪ್ರತಿಪಕ್ಷಗಳ ವಿರುದ್ಧ ವಾಗ್ದಾಳಿ



ನಡೆಸಿದರು.

ಶ್ರೀನಗರದ ಬಕ್ಷಿ ಕ್ರೀಡಾಂಗಣದಲ್ಲಿ ಸಾರ್ವಜನಿಕ ರ್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, 2019 ರಲ್ಲಿ ಸಂವಿಧಾನದ 370 ನೇ ವಿಧಿಯನ್ನು ರದ್ದುಗೊಳಿಸಿದ ನಂತರ ಜಮ್ಮು ಮತ್ತು ಕಾಶ್ಮೀರವು ಅಭಿವೃದ್ಧಿಯ ಹೊಸ ಮೈಲುಗಲ್ಲು ತಲುಪಿದೆ. ಇಲ್ಲಿನ ಜನ ಈಗ ಮುಕ್ತವಾಗಿ ಉಸಿರಾಡುತ್ತಿದ್ದಾರೆ ಎಂದರು.

ಕಾಂಗ್ರೆಸ್ ಮತ್ತು ಅದರ ಮಿತ್ರಪಕ್ಷಗಳು 370ನೇ ವಿಧಿಗೆ ಸಂಬಂಧಿಸಿದಂತೆ ಹಲವು ವರ್ಷಗಳಿಂದ "ಜಮ್ಮು ಮತ್ತು ಕಾಶ್ಮೀರದ ಜನರನ್ನು ಮಾತ್ರವಲ್ಲದೆ ಇಡೀ ದೇಶವನ್ನೇ ದಾರಿ ತಪ್ಪಿಸುತ್ತಿವೆ" ಎಂದು ಮೋದಿ ಆರೋಪಿಸಿದರು.

ಜಮ್ಮು ಮತ್ತು ಕಾಶ್ಮೀರ ದೇಶದ ಕಿರೀಟ ಎಂದು ಬಣ್ಣಿಸಿದ ಪ್ರಧಾನಿ, ಪ್ರವಾಸೋದ್ಯಮ ಮತ್ತು ರೈತರ ಸಬಲೀಕರಣದಿಂದ ಅಭಿವೃದ್ಧಿ ಹೊಂದಿದ ಜಮ್ಮು ಮತ್ತು ಕಾಶ್ಮೀರ ನಿರ್ಮಾಣವಾಗುತ್ತಿದೆ ಎಂದು ಹೇಳಿದರು.

## ಗ್ರಾಮೀಣ ಭಾರತದ ಶೇ.25 ರಷ್ಟು ಪ್ರದೇಶಗಳು ನಲ್ಲಿ ನೀರಿನ ವ್ಯವಸ್ಥೆಯಿಂದ ವಂಚಿತ

ನವದೆಹಲಿ: ದೇಶದ ಶೇ.25 ರಷ್ಟು ಗ್ರಾಮೀಣ ಪ್ರದೇಶಗಳಲ್ಲಿ ನಲ್ಲಿ ನೀರಿನ ವ್ಯವಸ್ಥೆ ಇಲ್ಲ ಎಂಬ ಮಾಹಿತಿ ಕೇಂದ್ರ ಸರ್ಕಾರದಿಂದ ಲಭ್ಯವಾಗಿದೆ. ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಜಲ ಶಕ್ತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಗ್ರಾಮೀಣ ಭಾಗದಲ್ಲಿನ ಶೇ.75 ರಷ್ಟು ಮನೆಗಳಿಗೆ ನಲ್ಲಿ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಹೇಳಿದ್ದಾರೆ. ಶೇ.75 ರಷ್ಟು ಪ್ರದೇಶಗಳಿಗೆ ನಲ್ಲಿ ನೀರಿನ ವ್ಯವಸ್ಥೆ ಕಲ್ಪಿಸಿರುವುದು ಬೃಹತ್ ಮೈಲಿಗಲ್ಲು ಎಂದು ಹೇಳಿರುವ ಶೇಖಾವತ್, ಈ ಸಾಧನೆ ಮಾಡಿರುವುದಕ್ಕೆ ಎಲ್ಲಾ ರಾಜ್ಯಗಳಿಗೂ ಧನ್ಯವಾದ ತಿಳಿಸಿದ್ದಾರೆ. ಹರ್ ಘರ್ ಜಲ್ ಅಭಿಯಾನದಡಿ ಶೇ.75 ರಷ್ಟು ಗುರಿ ದಾಟಿದ್ದೇವೆ. ಪ್ರತಿ ಮನೆಗೂ ಶುದ್ಧ ನಲ್ಲಿ ನೀರಿನ ವ್ಯವಸ್ಥೆ ಕಲ್ಪಿಸುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೃಷ್ಟಿಕೋನವನ್ನು ಸಾಕಾರಗೊಳಿಸುವತ್ತ ಅವಿರತವಾಗಿ ಶ್ರಮಿಸುತ್ತಿ ಎಲ್ಲಾ ರಾಜ್ಯಗಳಿಗೂ ಹಾಗೂ ಜಲಜೀವನ್ ಮಿಷನ್ ತಂಡಕ್ಕೂ ಅಭಿನಂದನೆಗಳು ಎಂದು ಗಜೇಂದ್ರ ಸಿಂಗ್ ಶೇಖಾವತ್ ಹೇಳಿದ್ದಾರೆ.

## ದಲಿತರು ಸಿಎಂ ಆಗಬೇಕೆಂಬ ಕೂಗು ಇಂದು, ನಿನ್ನೆದಲ್ಲ: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ: ದಲಿತರು ಸಿಎಂ ಆಗಬೇಕೆಂಬ ಕೂಗು ಇಂದು, ನಿನ್ನೆದಲ್ಲ. ಈ ಕೂಗು ಮಲ್ಲಿಕಾರ್ಜುನ ಖರ್ಗೆ ಅವರಿಂದ ಆರಂಭವಾಗಿದ್ದು, ದಲಿತರು ಸಿಎಂ ಆಗಬೇಕೆಂಬ ಬೇಡಿಕೆ ಕಾಂಗ್ರೆಸ್ ನಲ್ಲಿ ಅಷ್ಟೇ ಅಲ್ಲ. ಬಿಜೆಪಿ, ಜೆಡಿಎಸ್ ನಲ್ಲೂ ಇದೆ. ಆದ–ರೆ ಇದುವರೆಗೆ ದಲಿತರು ಯಾವುದೇ ಪಕ್ಷದಲ್ಲಿ ಸಿಎಂ ಆಗಲು ಸಾಧ್ಯವಾಗಿಲ್ಲ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಕುವೆಂಪು ನಗರದ ಸ್ವಗೃಹದಲ್ಲಿ ದಲಿತರಿಗೆ ಮುಖ್ಯಮಂತ್ರಿ ಸ್ಥಾನ ಕೊಡಿ ಎಂದು ಕೇಳಿಕೊಳ್ಳುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಸಮಾಜ ಕಲ್ಯಾಣ ಸಚಿವ ಡಾ. ಎಚ್. ಸಿ. ಮಹದೇವಪ್ಪ ಅಸಮಾಧಾನ ವ್ಯಕ್ತಪಡಿಸಿದ ಕುರಿತು ಮಾಧ್ಯಮದವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು,ಕಳೆದ 20 ವರ್ಷದಿಂದ ಮಲ್ಲಿಕಾರ್ಜುನ ಖರ್ಗೆ, 2013ರಲ್ಲಿ ಡಾ. ಜಿ. ಪರಮೇಶ್ವರ್ ಅವರು ಸಿಎಂ ಆಗಬೇಕೆಂಬ ಕೂಗು ಇತ್ತು. ಆದರೆ ಅವರಿಬ್ಬರಿಗೂ ಸಿಎಂ ಆಗುವ ಭಾಗ್ಯ ಸಿಗಲಿಲ್ಲ. ನಾನು ಅನೇಕ ಸಮಾವೇಶಗಳಲ್ಲಿ ದಲಿತರು ಸಿಎಂ ಆಗಲೇಬೇಕೆಂದು ಹೇಳಿದ್ದೇನೆ ಎಂದರು.

ಎಸ್ಸಿ, ಎಸ್ಟಿ ಸಮಾಜದವರು ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಮತ ಚಲಾಯಿಸುತ್ತಾರೆ. ನಮ್ಮ ಕಡೆ ಸೈನಿಕರು ಜಾಸ್ತಿ ಇದ್ದಾರೆ. ಸೈನಿಕರನ್ನು ಲೀಡ್ ಮಾಡುವ ಕ್ಯಾಪ್ಟನ್ ಇಲ್ಲ. ಕ್ಯಾಪ್ಟನ್ ಪಾತ್ರಗಳನ್ನು ರೆಡಿ ಮಾಡಬೇಕಿದೆ. ಹೈಕಮಾಂಡ್ ಎದುರು ಪ್ರಭಾವ ಬೀರುವಲ್ಲಿ ವಿಫಲರಾಗಿದ್ದೇವೆ. ಈ ಕು–ರಿತು ಲೋಕಸಭೆ ಚುನಾವಣೆ ನಂತರ ದಲಿತ ಸಿಎಂ ಬಗ್ಗೆ ದನಿ ಎತ್ತುತ್ತೇವೆ. ಈಗ ಲೋಕಸಭೆಯಲ್ಲಿ ಹೆಚ್ಚಿನ ಸೀಟು ಗೆಲ್ಲಲು ಆದ್ಯತೆ ನೀಡುತ್ತೇವೆಂದು ತಿಳಿಸಿದರು

ಕಾಂಗ್ರೆಸ್ ಪಕ್ಷ ಅಷ್ಟೇ ಅಲ್ಲ. ಬಿಜೆಪಿಯಲ್ಲಿ




ಗೋವಿಂದ ಕಾರಜೋಳ, ಜೆಡಿಎಸ್ ನಲ್ಲಿ ಎಚ್.ಕೆ. ಕುಮಾರಸ್ವಾಮಿ ಅವ–ರಿಗೂ ಸಿಎಂ ಆಗುವ ಅವಕಾಶ ಇತ್ತು. ಆದರೆ ಬಿಜೆಪಿ, ಜೆಡಿಎಸ್‌ನಲ್ಲೂ ದಲಿತ ನಾಯಕರು ಹೈಕಮಾಂಡ್ ಎದುರು ಪ್ರಭಾವ ಬೀರುವಲ್ಲಿ ವಿಫಲರಾಗಿದ್ದಾರೆ.

ಬೆಳಗಾವಿ, ಚಿಕ್ಕೋಡಿ ಕ್ಷೇತ್ರಗಳ ಲೋಕಸಭೆ ಅಭ್ಯರ್ಥಿಗಳ ಹೆಸರು 1ನೇ ಪಟ್ಟಿಯಲ್ಲಿ ಆಗಲ್ಲ. ಎರಡನೇ ಪಟ್ಟಿಯಲ್ಲಿ ಬಿಡುಗಡೆಯಾಗುತ್ತದೆ. ಈ ಕುರಿತು ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಜಿಲ್ಲೆಯ ಎಲ್ಲ ರಾಜಕಾರಣಿಗಳು ಎರಡ್ಮೂರು ದಿನಗಳಲ್ಲಿ ಇನ್ನೊಂದು ಸಭೆ ಮಾಡಲು ಸೂಚಿಸಿದ್ದಾರೆ. ಜಿಲ್ಲೆಯ ಎಲ್ಲಾ ನಾಯಕರು ಸಹಮತದಿಂದ ಅಭ್ಯರ್ಥಿಗಳನ್ನು ಸೂಚಿಸುತ್ತೇವೆಂದು ತಿಳಿಸಿದರು.

ಯಾವುದೇ ಅಭ್ಯರ್ಥಿಗಳನ್ನು ವಿಕ್ ಎಂದು ಹೇಳಲು ಆಗಲ್ಲ. ದೊಡ್ಡ ಸಮುದಾಯ ಇದ್ದಾಗ ಗೆದ್ದ ಉದಾಹರಣೆಗಳು ಇವೆ. ಜಿಲ್ಲೆಯಲ್ಲಿ ಕುರುಬ ಸಮುದಾಯದ ಶಾಸಕರು ಇಲ್ಲ. ಅವರಿಗೂ ಅವಕಾಶ ಸಿಕ್ಕಿಲ್ಲ ಎಂಬ ದೃಷ್ಟಿಯಿಂದ ಜಿಲ್ಲೆಯ ಎರಡು ಕ್ಷೇತ್ರಗಳಲ್ಲಿ ಒಂದನ್ನ ಕುರುಬ ಸಮುದಾಯಕ್ಕೆ ನೀಡಬೇಕೆಂದು ಚರ್ಚೆ ನಡೆದಿದ್ದು, ಇನ್ನು ಅಂತಿಮವಾಗಿಲ್ಲ ಎಂದರು.

ನಿಗಮ, ಮಂಡಳಿಗಳ ವಿಚಾರವಾಗಿ ಬೆಳಗಾವಿ ಜಿಲ್ಲೆಯ ಕಾಂಗ್ರೆಸ್ ಕಾರ್ಯಕರ್ತರು ನಿರಾಶೆಯಾಗಿದ್ದಾರೆ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವ ಸತೀಶ್ ಜಾರಕಿಹೊಳಿ, ಬೆಳಗಾವಿ ಜಿಲ್ಲೆಯ ಕಾಂಗ್ರೆಸ್ ಕಾರ್ಯಕರ್ತರು ಯಾರು ನಿರಾಶೆಯಾಗಿಲ್ಲ. ಬೆಳಗಾವಿಯ ಬುಡಾ, ಕಾಡಾದಲ್ಲಿ ಅವಕಾಶ ಇದೆ. ಆ ಎರಡು ಸ್ಥಾನಗಳನ್ನು ಸ್ಥಳೀಯರಿಗೆ ನೀಡಲಾಗುವುದೆಂದು ಹೇಳಿದರು.

ಶಾಸಕ ಲಕ್ಷ್ಮಣ ಸವದಿಗೆ ಒಳ್ಳೆಯ ಭವಿಷ್ಯವಿದೆ: ಶಾಸಕ ಲಕ್ಷ್ಮಣ ಸವದಿಗೆ ಒಳ್ಳೆಯ ಭವಿಷ್ಯವಿದೆ ಎಂದು ಸಿಎಂ ಸಿದ್ದರಾಮಯ್ಯನವರು ಅಥಣಿಯಲ್ಲಿ ಹೇಳಿದ್ದ ಹೇಳಿಕೆ ಬಗ್ಗೆ ಪ್ರತಿಕ್ರಿಯೆ ನೀಡಿದ ಸಚಿವ ಸತೀಶ್, ಶಾಸಕ ಲಕ್ಷ್ಮಣ ಸವದಿಗೆ ಒಳ್ಳೆಯ ಭವಿಷ್ಯವಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳುವ ಮುಂಚೆ ನಾನೇ ಹೇಳಿದ್ದೇನೆ. ಲೋಕಸಭೆ ಚುನಾವಣೆ ನಂತರ ಶಾಸಕ ಲಕ್ಷ್ಮಣ ಸವದಿ ಅವ–ರಿಗೆ ಒಳ್ಳೆಯ ಅವಕಾಶ ದೊರಕಬಹುದು ಎಂದು ತಿಳಿಸಿದ್ದಾರೆ.

# ಹೆಣ್ಣೆಂದರೆ "ಸೃಷ್ಟಿಯ ಅದ್ಭುತ ರೂಪ" ಮತ್ತು "ಭಾವನೆಗಳ ಒಡತಿ"




ಇಂದು (ಮಾರ್ಚ–8) ಜಗತ್ತಿನಾದ್ಯಂತ "ಅಂತರರಾಷ್ಟ್ರೀಯ ಮಹಿಳಾ ದಿನ"ವನ್ನಾಗಿ ಆಚರಣೆ ಮಾಡಲಾಗುತ್ತದೆ. ಮಹಿಳೆ ಎಂದರೆ ಒಬ್ಬ "ಅವಿನಾಶಿ", ಆಕೆ ಒಬ್ಬ "ಸಂಜೀವಿನಿ", ಅವಳು ಒಬ್ಬ "ವಿಶಿಷ್ಟ ಶಕ್ತಿಯ ಸಂಗಮ" ಎಂದರೆ ತಪ್ಪಾಗಲಾರದು. ಪ್ರಪಂಚದಾದ್ಯಂತ "ಅಂತರರಾಷ್ಟ್ರೀಯ ಮಹಿಳಾ ದಿನ" ಒಂದು ವಿಶೇಷ ದಿನವಾಗಿದ್ದು, ಜಾಗತಿಕವಾಗಿ ಆಚರಿಸುವ ದಿನವಾಗಿದೆ, ಮಹಿಳೆ "ಒಂದು ಕುಟುಂಬದ ಆಧಾರ ಸ್ತಂಭವಾಗಿ, ಆರ್ಥಿಕ, ಸಾಂಸ್ಕೃತಿಕ, ರಾಜಕೀಯ, ವಿಜ್ಞಾನ, ಕ್ರೀಡಾ ಕ್ಷೇತ್ರಗಳಲ್ಲಿ ಮಾಡಿದ ಸಾಧನೆ" ಯನ್ನು ನೆನೆಯುವ ದಿನವಾಗಿದೆ.

ಮಹಿಳೆಯರ ದಿನಾಚರಣೆಯನ್ನು ಕಳೆದ 100 ವರ್ಷಗಳಿಂದಲೂ ಆಚರಿಸಲಾಗುತ್ತಿದ್ದು, 1911 ರಲ್ಲಿ ಡೆನ್ಮಾರ್ಕ್, ಆಸ್ಟ್ರೀಯ, ಜರ್ಮನಿ, ಸ್ವಿಜರ್‌ಲ್ಯಾಂಡ್ ದೇಶಗಳಲ್ಲಿ ದಶಲಕ್ಷಗಟ್ಟಲೇ ಜನರು ಒಂದು ಕಡೆ ಸೇರುವ ಮೂಲಕ ಮಹಿಳಾ ದಿನಾಚರಣೆಯನ್ನು ಆಚರಿಸಲು ಆರಂಭಿಸಿದರು. ಅಂತರಾಷ್ಟ್ರೀಯ ಮಹಿಳೆಯರ ದಿನ'ವನ್ನು ಮೊದಲ ಬಾರಿಗೆ ಕೂಲಿ ಚಳುವಳಿಯ ಮೂಲಕ ಉತ್ತರ ಅಮೆರಿಕ ಮತ್ತು ಯೂರೋಪ್ ದೇಶಗಳಲ್ಲಿ ಹೊರಹೊಮ್ಮಿತು. ಮಹಿಳಾ ದಿನಾಚರಣೆ ಮೂಲಕ ಲಿಂಗ ಸಮಾನತೆ ರೂಪಿಸುವಲ್ಲಿ ಪ್ರತಿಯೊಬ್ಬರ ಪಾತ್ರವಿದೆ ಎಂಬ ಅಂಶವನ್ನು ಬಲವಾಗಿ ಹೇಳಲು ಈ ದಿನ ಒಂದು ದೊಡ್ಡ ವೇದಿಕೆ ಆಗಿರುತ್ತದೆ. ಅಲ್ಲದೇ ದೇಶಕ್ಕೆ, ಪ್ರಪಂಚಕ್ಕೆ ಮಹಿಳಾ ಸಾಧಕರ ಕೊಡುಗೆಗಳನ್ನು ನೆನೆದು ಸಾರುವ ದಿನವಿದು.

1975 ರ ಮಾರ್ಚ್ 8 ರ "ಅಂತರರಾಷ್ಟ್ರೀಯ ಮಹಿಳಾ ದಿನ"ವನ್ನು ಸಂಯುಕ್ತ ರಾಷ್ಟ್ರಗಳು ಮಹಿಳಾ ದಿನವನ್ನಾಗಿ ಆಚರಿಸಲು ಆರಂಭಿಸಿದವು. ವಿಶ್ವಸಂಸ್ಥೆಯು 1975 ರಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲು ಪ್ರಾರಂಭಿಸಿತು, ಇದನ್ನು ಅಂತರರಾಷ್ಟ್ರೀಯ ಮಹಿಳಾ ವರ್ಷವೆಂದು ಘೋಷಿಸಲಾಯಿತು. 1977 ರಲ್ಲಿ ಯುನೈಟೆಡ್ ನೇಷನ್ಸ್ ಜನರಲ್ ಅಸೆಂಬ್ಲಿ ಮಾರ್ಚ್ 8 ಅನ್ನು ಮಹಿಳಾ ಹಕ್ಕುಗಳು ಮತ್ತು ವಿಶ್ವ ಶಾಂತಿಗಾಗಿ ಅಧಿಕೃತ ಯುಎನ್ ರಜಾದಿನವೆಂದು ಘೋಷಿಸಲು ಸದಸ್ಯ ರಾಷ್ಟ್ರಗಳನ್ನು ಆಹ್ವಾನಿಸಿತು. ಅಂದಿನಿಂದ ಇದನ್ನು ಯುಎನ್ ಮತ್ತು ಪ್ರಪಂಚದ ಹೆಚ್ಚಿನ ಭಾಗಗಳಿಂದ ವಾರ್ಷಿಕವಾಗಿ ಸ್ಮರಿಸಲಾಗುತ್ತದೆ, ಪ್ರತಿ ವರ್ಷದ ಆಚ–'ರಣೆಯು ಮಹಿಳಾ ಹಕ್ಕುಗಳೊಳಗಿನ ನಿರ್ದಿಷ್ಟ ವಿಷಯ ಅಥವಾ ಸಮಸ್ಯೆಯ ಮೇಲೆ ಕೇಂದ್ರೀಕೃತವಾಗಿದೆ.

**ಥೀಮ್:–** ಪ್ರತಿ ವರ್ಷ ಒಂದೊಂದು ಥೀಮ್ (ವಿಷಯ) ದೊಂದಿಗೆ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಣೆ ಮಾಡಲಾಗುತ್ತದೆ. ಅದರ ಸುತ್ತ ಎಲ್ಲಾ ಆಚರಣೆಗಳನ್ನು ಯೋಜಿಸಲಾಗುತ್ತದೆ. 2023 ರಲ್ಲಿ"ಡಿಜಿಟಎಎಲ್‌:ಲಿಂಗ ಸಮಾನತೆಗಾಗಿ ನಾವೀನ್ಯತೆ ಮತ್ತು ತಂತ್ರಜ್ಞಾನ" ಎಂದ ಥೀಮ್ ನೊಂದಿಗೆ ಆಚರಣೆ ಮಾಡಿದರೆ, 2024 ರಲ್ಲಿ "ಮಹಿಳೆಯರಲ್ಲಿ ಹೂಡಿಕೆ: ಪ್ರಗತಿಯನ್ನು ವೇಗಗೊಳಿಸಿ" ಎಂಬ ಥೀಮ್ ನೊಂದಿಗೆ ಆಚರಣೆ ಮಾಡಲಾಗುತ್ತಿದೆ. ಅದೇ ರೀತಿಯಾಗಿ ಮಹಿಳಾ ದಿನದ ಬಣ್ಣದ ಥೀಮ್ ನೇರಳೆ, ಹಸಿರು ಮತ್ತು ಬಿಳಿ, ಇದು ನ್ಯಾಯ, ಭರವಸೆ, ಶುದ್ಧತೆ ಮತ್ತು ಘನತೆಯನ್ನು ಸೂಚಿಸುತ್ತದೆ.

**ನಮಗೆ ತಿಳಿದಿರಬೇಕಾದ ಮಾಹಿತಿ:–**

1984 ರಲ್ಲಿ ಆಸ್ಟ್ರೇಲಿಯಾವು ವಿಶ್ವದ ಮೊದಲ ಮಹಿಳಾ ಬಜೆಟ್ ಹೇಳಿಕೆಯನ್ನು ಪರಿಚಯಿಸಿತು, ಇದು ಇತರ ಅನೇಕರಿಗೆ ಅನುಸರಿಸಲು ದಾರಿ ಮಾಡಿಕೊಟ್ಟಿತು.

ಕ್ಯೂಬಾ, ವಿಯೆಟ್ನಾಂ, ಅಫ್ಘಾನಿಸ್ತಾನ, ಕಾಂಬೋಡಿಯಾ, ಲಾವೋಸ್, ಮತ್ತು ರಶಿಯಾ ಮುಂತಾದ ಪ್ರಪಂಚದ ಅನೇಕ ಭಾಗಗಳಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನವು ಅಧಿಕೃತ ರಜಾದಿನವಾಗಿದೆ.

ಮಹಿಳಾ ದಿನವನ್ನು ಮಹಿಳಾ ಹಕ್ಕುಗಳು ಮತ್ತು ಅಂತರರಾಷ್ಟ್ರೀಯ ಶಾಂತಿಗಾಗಿ ವಿಶ್ವಸಂಸ್ಥೆಯ ದಿನ ಎಂದೂ ಕರೆಯಲಾಗುತ್ತದೆ.

ಮೊದಲ ಅಂತರರಾಷ್ಟ್ರೀಯ ಮಹಿಳಾ ದಿನವನ್ನು 1911 ರಲ್ಲಿ ಮಾರ್ಚ್ 19 ರಂದು ಆಚರಿಸಲಾಯಿತು. ನಂತರ ದಿನಾಂಕವನ್ನು 1913 ರಲ್ಲಿ ಮಾರ್ಚ್ 8 ಕ್ಕೆ ಬದಲಾಯಿಸಲಾಯಿತು.

ಅಂತರಾಷ್ಟ್ರೀಯ ಮಹಿಳಾ ದಿನದ ಲಾಂಛನವು ಸ್ತ್ರೀಲಿಂಗ ಚಿಹ್ನೆಯನ್ನು ಹೊಂದಿದೆ.

2011 ರಲ್ಲಿ ಮಾಜಿ ಅಧ್ಯಕ್ಷ ಬರಾಕ್ ಒಬಾಮಾ ಅವರು ಯುನೈಟೆಡ್ ಸ್ಟೇಟ್ಸ್‌ನಲ್ಲಿ ಮಾರ್ಚ್ ತಿಂಗಳನ್ನು ಮಹಿಳಾ ಇತಿಹಾಸದ ತಿಂಗಳು ಎಂದು ಘೋಷಿಸಿದರು.

1971 ರಲ್ಲಿ ಮಾರ್ಚ್ 8 ರಂದು ಮೊದಲ ವಿಶ್ವ ಸಮರದ ಸಮಯದಲ್ಲಿ ರಷ್ಯಾದ ಮಹಿಳೆಯರು ಬ್ರೆಡ್ ಮತ್ತು ಶಾಂತಿಗಾಗಿ ಮುಷ್ಕರ ನಡೆಸಿದರು. ಇದಲ್ಲದೆ, ತಾತ್ಕಾಲಿಕ ಸರ್ಕಾರವು ಮಹಿಳಾ ದಿನದ ಸಂದರ್ಭದಲ್ಲಿ ರಷ್ಯಾದ ಮಹಿಳೆಯರಿಗೆ ಮತದಾನದ ಹಕ್ಕನ್ನು ನೀಡಿತು.

ಪ್ರಪಂಚದ ಕೆಲವು ಭಾಗಗಳಲ್ಲಿ, ತಾಯಂದಿರ ದಿನದ ಜೊತೆಗೆ ಅಂತರರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲಾಗುತ್ತದೆ.

ಸೆರ್ಬಿಯಾ, ಅಲ್ಬೇನಿಯಾ, ಉಜ್ಬೇಕಿಸ್ತಾನ್, ಮ್ಯಾಸಿಡೋನಿಯಾದಂತಹ ದೇಶಗಳಲ್ಲಿ ಎರಡು ರಜಾದಿನಗಳನ್ನು ಸಂಂ–ಯೋಜಿಸಲಾಗಿದೆ.

**ಮಹಿಳೆಯರಿಗೆ ಗೌರವ ಸಲ್ಲಿಸೋಣ:–** ತಾಯಿಯಾಗಿ, ನಾನು ಹುಟ್ಟುವ ಮುಂಚೆ ಒಂಭತ್ತು ತಿಂಗಳು ಹೊತ್ತು, ನಾನು ಹುಟ್ಟಿದ ನಂತರ ನನ್ನ ಕೈ ಹಿಡಿದು ನಡೆಸುತ್ತಾಳೆ. ಅಕ್ಕನಾಗಿ, ನಾನು ಮಗುವಾಗಿದ್ದಾಗ ನನ್ನ ಜೊತೆ ಆಟವಾಡುತ್ತಾ ನನ್ನ ಜೋಪಾನ ಮಾಡುತ್ತಾಳೆ. ಗೆಳತಿಯಾಗಿ ಸಹಪಾಠಿಯಾಗಿ ನನ್ನ ಭಾವನೆಗಳನ್ನು ಅರ್ಥಮಾಡಿಕೊಳ್ಳುತ್ತಾಳೆ. ಶಿಕ್ಷಕಿಯಾಗಿ ಶಾಲೆಯಲ್ಲಿ ಪಾಠ ಹೇಳಿ, ನನ್ನ ತಪ್ಪು ತಿದ್ದಿ, ಸರಿಯಾದ ಮಾರ್ಗ ತೋರಿಸುತ್ತಾಳೆ. ಹೆಂಡತಿಯಾಗಿ ನನಗೆ ಸಹಾಯ ಮಾಡುತ್ತಾ, ನನ್ನ ಬೇಕು ಬೇಡಗಳನ್ನು ಪೂರೈಸಿ, ಪ್ರೀತಿ ಮಾಡುತ್ತಾಳೆ. ಮಗಳಾಗಿ, ನನಗೆ ಕಷ್ಟವೆಂದಾಗ ಕಣ್ಣೀರು ಹಾಕುತ್ತಾಳೆ. ಭೂಮಿ ತಾಯಿಯಾಗಿ, ನಾನು ಸತ್ತಾಗ ಮಲಗಲು ಜಾಗ ನೀಡುತ್ತಾಳೆ. ಈ ಭೂಮಿಯ ಮೇಲೆ ಮಹಿಳೆಗೆ ಒಂದು ವಿಶೇಷ ಸ್ಥಾನವಿದೆ. ಕಾರಣವಿಷ್ಟೆ ಅವಳು ಸೃಷ್ಟಿಯ ಅದ್ಭುತ ರೂಪ, ಭಾವನೆಗಳ ಒಡತಿ, ಸಾಧನೆಗೆ ಸ್ಫೂರ್ತಿ, ತಾಳ್ಮೆಯ ಮೂರ್ತಿ, ಪ್ರೀತಿಯ ಅರ್ಥ ಹಾಗೂ ಕರುಣೆಯ ಕಡಲು. ಆದ್ದರಿಂದ ನೀವು ಪುರುಷರಾಗಿದ್ದಲ್ಲಿ ಹೆಣ್ಣನ್ನು ಗೌರವಿಸಿ, ನೀವು ಮಹಿಳೆಯಾಗಿದ್ದಲ್ಲಿ ಹೆಣ್ಣಾಗಿ ಹುಟ್ಟಿದ್ದಕ್ಕೆ ಹೆಮ್ಮೆ ಪಡಿ. ಮತ್ತೊಮ್ಮೆ ಎಲ್ಲ ಮಹಿಳೆಯರಿಗೂ "ಅಂತರರಾಷ್ಟ್ರೀಯ ಮಹಿಳಾ ದಿನ"ದ ಶುಭಾಶಯಗಳು.

**–ಎನ್.ಎನ್.ಕಬ್ಬೂರ**
ಶಿಕ್ಷಕರು ತಾ–ಸವದತ್ತಿ
ಜಿ–ಬೆಳಗಾವಿ
ಮೊಬೈಲ್–9740043452

# ಕುಟುಂಬಸ್ಥರು ಗರ್ಭಿಣಿಯ ಸೂಕ್ತ ಆರೈಕೆಯಿಂದ ತಾಯಿ ಮರಣ ತಪ್ಪಿಸಲು ಕೈಜೋಡಿಸಿ: ಡಿಹೆಚ್‌ಓ ಡಾ.ವೈ ರಮೇಶಬಾಬು

ಬಳ್ಳಾರಿ: ಮದುವೆ ನಂತರದಲ್ಲಿ ಸೊಸೆಯು ಗಂಡನ ಮನೆತನಕ್ಕೆ ಒಂದು ಕುಡಿಯನ್ನು ನೀಡಲಿ ಎಂಬುದು ತಲೆತಲಾಂತರದಿಂದ ಬಂದ ನಾಣ್ನುಡಿಯಾಗಿದ್ದು, ಗರ್ಭಿಣಿಯೆಂದು ತಿಳಿದ ದಿನದಿಂದಲೇ ಕುಟುಂಬದ ಸದಸ್ಯರು ಗರ್ಭಿಣಿಯ ಆರೈಕೆಯನ್ನು ಮನೆಯ ಮಗಳಂತೆ ಕಾಳಜಿ ವಹಿಸಿ, ಹೆರಿಗೆಯನ್ನು ಆಸ್ಪತ್ರೆಯಲ್ಲಿ ಮಾಡಿಸುವ ಮೂಲಕ ತಾಯಿ ಮಗುವಿನ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ ರಮೇಶಬಾಬು ಅವರು ವಿನಂತಿಸಿದ್ದಾರೆ.

ಸಾಮಾನ್ಯವಾಗಿ 18 ವರ್ಷ ವಯಸ್ಸಿನ ನಂತರ ಹೆಣ್ಣು ಮಗಳಿಗೆ ಮದುವೆ ಮಾಡಿಸಬೇಕು. ಗರ್ಭಿಣಿಯೆಂದು ಗೊತ್ತಾದ ಕೂಡಲೆ ಆರೋಗ್ಯ ಇಲಾಖೆ ಅಥವಾ ಹತ್ತಿರದ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ ನೊಂದಣಿ ಮಾಡಿಸಿಕೊಳ್ಳುವ ಮೂಲಕ ತಾಯಿಕಾರ್ಡ್ ಪಡೆಯಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪೌಷ್ಟಿಕ ಆಹಾರ ಸೇವನೆ:**

ಪ್ರತಿದಿನ ಪೌಷ್ಟಿಕ ಆಹಾರ, ತರಕಾರಿ, ಹಸಿರು ಪಲ್ಯ, ಬೇಳೆಕಾಳು, ಮೊಳಕೆ ಕಾಳು, ಸ್ಥಳೀಯ ತರಕಾರಿಗಳು ಆಯಾ ಋತುಮಾನಕ್ಕೆ ಸಿಗುವ ಹಣ್ಣುಗಳನ್ನು ಆಹಾರದಲ್ಲಿ ಸೇವಿಸಲು ಒದಗಿಸಬೇಕು ಎಂದು ಹೇಳಿದ್ದಾರೆ.

**ಅಗತ್ಯ ಪರೀಕ್ಷೆ ಮತ್ತು ತಪಾಸಣೆ:**

ಗಭೀರ್ಣಿಯ ಸುರಕ್ಷತೆಗೆ ರಕ್ತಹೀನತೆ ತಡೆಯಲು ಪ್ರತಿದಿನ ಒಂದರಂತೆ ಕನಿಷ್ಠ 180 ಕಬ್ಬಿಣಾಂಶ ಮಾತ್ರೆಗಳ ಸೇವನೆ, ರಕ್ತಹೀನತೆ ಇದ್ದರೆ ದಿನಕ್ಕೆ ಎರಡರಂತೆ 360 ಮಾತ್ರೆಗಳನ್ನು ಸೇವಿಸುವುದು ಹಾಗೂ ನಿಯಮಿತವಾಗಿ ರಕ್ತದೊತ್ತಡ, ಸಕ್ಕರೆ ಕಾಯಿಲೆ, ತೂಕದ ಪರೀಕ್ಷೆಗಳನ್ನು ಮಾಡಿಸಿದಲ್ಲಿ ತಾಯಿಯ ಆರೋಗ್ಯದ ಸಮಸ್ಯೆಗಳಿಗೆ ಸೂಕ್ತ ಆರೈಕೆ ನೀಡಲು ಸಾಧ್ಯವಾಗುತ್ತದೆ. ಅಲ್ಲದೆ ಸಾಕಷ್ಟು



ವಿಶ್ರಾಂತಿಯನ್ನು ನೀಡುವ ಮೂಲಕ ಗರ್ಭಿಣಿಗೆ ಕುಟುಂಬದ ಬೆಂಬಲವಿರುವ ಬಗ್ಗೆ ಖಾತ್ರಿಪಡಿಸಬೇಕು ಎಂದು ವಿನಂತಿಸಿದ್ದಾರೆ.

**ಗಂಡಾಂತರ ಗರ್ಭಿಣಿ ಲಕ್ಷಣಗಳು:**

ಗಂಡಾಂತರ ಗರ್ಭಿಣಿಯೆಂದು ನಿರ್ಧ–ರಿಸಲು, 18 ವರ್ಷಕ್ಕಿಂತ ಮೊದಲು ಅಥವಾ 30 ವರ್ಷ ವಯಸ್ಸಿನ ನಂತರ ಗರ್ಭಿಣಿಯಾದಲ್ಲಿ, ರಕ್ತದಲ್ಲಿ ಕಬ್ಬಿಣಾಂಶ 9 ಕ್ಕಿಂತ ಕಡಿಮೆ ಇದ್ದಲ್ಲಿ, ಎತ್ತರ 142 ಸೆಂ.ಮೀ.ಗಿಂತ ಕಡಿಮೆ ಇದ್ದಲ್ಲಿ, ರಕ್ತದೊತ್ತಡ 140/90 ಗಿಂತ ಹೆಚ್ಚು ಇದ್ದಲ್ಲಿ, ಅವಳಿ–ಜವಳಿ ಗರ್ಭಿಣಿ ಇದ್ದಲ್ಲಿ, ಮೊದಲ ಹೆರಿಗೆ ಶಸ್ತ್ರಚಿಕಿತ್ಸೆ ಮೂಲಕವಾದಲ್ಲಿ, ಹೆಚ್‌ಐವಿ, ಹೆಚ್‌ಬಿಎಸ್–ಎಸಿಜಿ, ಮೂರ್ಛೆರೋಗ, ಥೈರಾಯ್ಡ್, ಹೈಪೊಥೈರಾಯ್ಡ್, ರಕ್ತ ಸಂಬಂಧಿತ ಖಾಯಿಲೆಗಳಿದ್ದಲ್ಲಿ, ಗರ್ಭಕೋಶದ ಬೆಳವಣಿಯ ತೊಂದರೆಯಿದ್ದಲ್ಲಿ, ಸ್ಕ್ಯಾನಿಂಗ್ನಲ್ಲಿ ಮಗು ಅಡ್ಡಲಾಗಿ ಇರುವದು ಕಂಡುಬಂದಲ್ಲಿ, ಮಾಸದ ಸ್ಥಳದ ಅಡಚಣೆ (ಪ್ಲಸೇಂಟಾ ಪ್ರಿವಿಯಾ) ಮುಂತಾದ ತೊಂದರೆಗಳು ಇರುವವರು ವೈದ್ಯರ ನಿರ್ದೇಶನ, ಮಾರ್ಗದರ್ಶನ, ಪಡೆದು ಸ್ಥಳಿಯ ವೈದ್ಯಕೀಯ ಸಿಬ್ಬಂದಿಯವರ ಸಲಹೆಯಂತೆ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸಬೇಕು ಎಂದು ತಿಳಿಸಿದ್ದಾರೆ.

**ನಕಲಿ ವೈದ್ಯರ ಬಳಿ ಹೆರಿಗೆ ಬೇಡ:**

ಯಾವುದೇ ವೈದ್ಯ ಪದವಿ ಪಡೆಯದೇ ವೈದ್ಯ ವೃತ್ತಿ ಮಾಡುವ ವೈದ್ಯರಲ್ಲಿ, ಮುಖ್ಯವಾಗಿ ಗ್ರಾಮೀಣ ಭಾಗದಲ್ಲಿ ಜನತೆಗೆ ಮೊಸ ಮಾಡುವ ನಕಲಿ ವೈದ್ಯರ ಬಳಿ ಹೆರಿಗೆ ಮಾಡಿಸದಂತೆ ಜಿಲ್ಲಾ ಆರೋಗ್ಯಾಧಿಕಾರಿಗಳು ವಿನಂತಿಸಿದ್ದಾರೆ.

**ಸುಸಜ್ಜಿತ ಹೆರಿಗೆ ವ್ಯವಸ್ಥೆ:**

ಪ್ರಸ್ತುತ ಎಲ್ಲ ಸರಕಾರಿ ಆರೋಗ್ಯ ಕೇಂದ್ರಗಳಲ್ಲಿ ನುರಿತ ವೈದ್ಯರು, ಸಿಬ್ಬಂದಿಯವರು, ಯಾವುದೆ ಖಾಸಗಿ ಅಸ್ಪತ್ರೆಗಳಿಗೆ ಕಡಿಮೆ ಇಲ್ಲದ ಸುಸಜ್ಜಿತ ಹೆರಿಗೆ ಕೊಠಡಿ, ಅಗತ್ಯ ಶುಚಿತ್ವ ಕ್ರಮಗಳ ಅನುಸರಿಸುವಿಕೆ, ಮಗುವನ್ನು ಬೆಚ್ಚಗಿಡಲು ಬೆಬಿ ವಾರ್ಮರ್, ಅಗತ್ಯವೆನಿಸಿದಲ್ಲಿ ಮೇಲ್ಮಟ್ಟದ ಆಸ್ಪತ್ರೆಗೆ ಕಳುಹಿಸಲು ಆಂಬ್ಯುಲೆನ್ಸ್ ವ್ಯವಸ್ಥೆ, ಇರುವುದರಿಂದ ಮನೆಯಲ್ಲಿ ಹೆರಿಗೆ ಮಾಡಿಸದಂತೆ, ಸರಕಾರಿ ಆಸ್ಪತ್ರೆಯಲ್ಲಿ ಮಾಡಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ ರಮೇಶ್ಬಾಬು ಅವರು ಕೋರಿದ್ದಾರೆ.

## ಮಾ.9 ರಂದು ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಪತ್ತೆ ತಂತ್ರ ವಿಧಾನಗಳ ಕುರಿತ ಕಾರ್ಯಗಾರ

ಧಾರವಾಡ: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ರಾಷ್ಟ್ರೀಯ ಆರೋಗ್ಯ ಅಭಿಯಾನ ಆಶ್ರಯದಲ್ಲಿ ಗರ್ಭಪೂರ್ವ ಮತ್ತು ಪ್ರಸವ ಪೂರ್ವ ಪತ್ತೆ ತಂತ್ರ ವಿಧಾನಗಳ (ಲಿಂಗ ಆಯ್ಕೆ ನಿಗಧೀಧ) ಕಾಯ್ದೆಯ 1994 ಕುರಿತಂತೆ (ಪಿಸಿ & ಪಿಎನ್ ಡಿಟಿ ಆಕ್ಟ್ 1994) "ಸ್ತ್ರೀರೋಗ ತಜ್ಞರು, ಕಾರ್ಡಿಯಾಲಜಿಸ್ಟ, ರೀಡಿಯೊಲಿಸ್ತ ಹಾಗೂ ಅಲ್ಟ್ರಾಸೌಂಡ್ ಸ್ಕ್ಯಾನಿಂಗ ಕೇಂದ್ರದ ಮಾಲೀಕರಿಗೆ ಮತ್ತು ಆಡಳಿತಾಧಿಕಾರಿಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಮಾರ್ಚ್ 9 ರಂದು ಬೆಳಗ್ಗೆ 9.30 ಗಂಟೆಗೆ ಸತ್ತೂರಿನ ಎಸ್ಡಿಎಂ ಸೂಪರ್ ಸ್ಪೇಗಣಲಿಟಿ ಆಸ್ಪತ್ರೆಯ ಈಶಾವಾಸ್ಯಂ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಪರಶುರಾಮ ಎಫ್ ದೊಡ್ಡಮನಿ ಕಾರ್ಯಕ್ರಮದಲ್ಲಿ ಉಪಸ್ಥಿತ–ರಿರುವರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಕಾರ್ಯಕ್ರಮದ ಉದ್ಘಾಟನೆ ಮಾಡುವರು. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಕ ಅಧಿಕಾರಿ ಸ್ವರೂಪ ಟಿ.ಕೆ. ಅವರು ಮುಖ್ಯ ಅಥಿತಿಗಳಾಗಿ ಆಗಮಿಸುವರು.

ಕಾರ್ಯಾಗಾರದಲ್ಲಿ ಪಿ.ಸಿ. & ಪಿ.ಎನ್.ಡಿ.ಟಿ ಕಾಯ್ದೆ ಹಾಗೂ ಕೆ.ಪಿ.ಎಂ. ಇ ಕಾಯ್ದೆಯ ಉಪನಿರ್ದೇಶಕ ವಿವೇಕ ದೊರೈ, ಎಸ್ಡಿಎಂ ವಿಶ್ವವಿದ್ಯಾಲಯದ ಉಪಕುಲಪತಿ ಡಾ.ನಿರಂಜನ ಕುಮಾರ, ಹುಬ್ಬಳ್ಳಿ ಕಿಮ್ಸ್ ನಿರ್ದೇಶಕ ಎಸ್.ಎಫ್.ಕಮ್ಮಾರ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಸಂಗಪ್ಪ ಗಾಬಿ, ಎಸ್ಡಿಎಂ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ರತ್ನಮಾಲಾ ದೇಸಾಯಿ, ಎಸ್. ಡಿ ಎಂ. ನಾರಾಯಣ ಹೃದಯಾಲಯ ಕೇಂದ್ರದ ಹಿರಿಯ ಹೃದಯರೋಗ ತಜ್ಞ ವಿವೇಕಾನಂದ ಗಜಪತಿ, ಹಾಗೂ ಡಾ.ರಾಜೇಶ ರೇವಣ, ಡಾ ರಮೇಶ ಕುಮಾರ, ಪಿ.ಸಿ. & ಪಿ.ಎನ್. ಡಿ. ಟಿ.ಕಾಯ್ದೆಯ ಜಿಲ್ಲಾ ಸಲಹಾ ಸಮಿತಿಯ ಡಾ.ಭಾರತಿ ಕೊರ್ಲಹಳ್ಳಿ, ಐಎಂಎ ಘಟಕದ ಅಧ್ಯಕ್ಷ ಡಾ.ಸತೀಶ ಇರಕಲ್, ಐ.ಎಂ.ಎ ಹುಬ್ಬಳ್ಳಿ ಘಟಕದ ಅಧ್ಯಕ್ಷ ಡಾ. ವೆಂಕಟೇಶ ಮೂಲಿಮನಿ ಭಾಗವಹಿಸುವರು.

ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞ ಕಿಮ್ಸ್ ಆಸ್ಪತ್ರೆಯ ಡಾ. ಯೋಗೇಂದ್ರ ಕಬಾಡಿ ಸೇರಿದಂತೆ ಇತರ ತಜ್ಞರು ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸುವರು ಎಂದು ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಶಶಿ ಪಾಟೀಲ ಅವರು ತಿಳಿಸಿದ್ದಾರೆ.

## ಮಾ.10 ರಂದು ಕರ್ನಾಟಕ ಪೋಲೀಸ್ 10ಕೆ ರನ್



ಬಳ್ಳಾರಿ: ರಾಜ್ಯ ಪೊಲೀಸ್ ಸುವರ್ಣ ಮಹೋತ್ಸವ ಆಚರಣೆ ಅಂಗವಾಗಿ ನಮ್ಮೆಲ್ಲರ ಸದೃಢತೆ ಹಾಗೂ ಡ್ರಗ್ಸ್ ಮುಕ್ತ ಕರ್ನಾಟಕ ಮಾಡುವ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಮಾ.10 ರಂದು ಬೆಳಗ್ಗೆ 6.30 ಗಂಟೆಗೆ ನಗರದ ಡಾ.ರಾಜ್ಕುಮಾರ್ ರಸ್ತೆಯ ಮುನಿಸಿಪಲ್ ಹೈಸ್ಕೂಲ್ ಮೈದಾನದ ಆವರಣದಿಂದ ಕರ್ನಾಟಕ ಪೊಲೀಸ್ 10ಕೆ ರನ್ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಪೊಲೀಸ್ ಅಧೀಕ್ಷಕ ರಂಜೀತ್ ಕುಮಾರ್ ಬಂಡಾರು ಅವರು ತಿಳಿಸಿದ್ದಾರೆ.

## ಮಾ.11 ರಿಂದ 14 ರವರೆಗೆ ಸಂಜೀವಿನಿ–ಸ್ವ ಸಹಾಯ ಗುಂಪುಗಳ ಉತ್ಪನ್ನಗಳ ಮಾರಾಟ ಮೇಳ

ಬಳ್ಳಾರಿ: ಜಿಲ್ಲಾ ಪಂಚಾಯತ್ ವತಿಯಿಂದ ಸಂಜೀವಿನಿ ಕೆ.ಎಸ್.ಆರ್.ಎಲ್.ಪಿ.ಎಸ್. ಅಡಿಯಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಾ.11 ರಿಂದ 14 ರವರೆಗೆ ಸಂಜೀವಿನಿ – ಸ್ವ ಸಹಾಯ ಗುಂಪುಗಳ ಉತ್ಪನ್ನಗಳ ಮಾರಾಟ ಮೇಳವನ್ನು ನಗರದ ಹೆಚ್.ಆರ್.ಗವಿಯಪ್ಪ ವೃತ್ತದ (ಮೋತಿ ವೃತ್ತ) ಇಂದಿರಾ ಕ್ಯಾಂಟೀನ್ ಬಳಿ ಆಯೋಜಿಸಲಾಗುವುದು ಜಿಪಂ ಯೋಜನಾ ನಿರ್ದೇಶಕರು ತಿಳಿಸಿದ್ದಾರೆ.

ಮಹಿಳಾ ಸ್ವ–ಸಹಾಯ ಸಂಘಗಳ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಸೌಲಭ್ಯವನ್ನು ಕಲ್ಪಿಸುವ ಸಂಬಂಧ 2023–24 ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಪ್ರತಿ ಜಿಲ್ಲೆಯಲ್ಲಿ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಆಯೋಜಿಸಲಾಗುತ್ತಿದೆ.

ಮುಖ್ಯವಾಗಿ ಒಂದನ್ನು ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯಂದು ಹಾಗೂ ಮತ್ತೊಂದು ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಜಿಲ್ಲೆಯಲ್ಲಿ ಸ್ಥಳೀಯವಾಗಿ ನಡೆಯುವ ಜಾತ್ರೆ ಹಬ್ಬ ದಿನಗಳಂದು ಆಯೋಜಿಸಲಾಗುವುದು.

ಪ್ರಯುಕ್ತ ಮಾ.11 ರಿಂದ 14 ರವರೆಗೆ ನಡೆಯುವ ಮಾರಾಟ ಮೇಳದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗ್ರಾಮಿಣ ಭಾಗದ ಮಹಿಳೆಯರು ತಯಾರಿಸಿದ ಗೃಹ ಉಪಯೋಗಿ ವಸ್ತುಗಳು, ಕರಕುಶಲ ವಸ್ತುಗಳು, ಬೇಕರಿ ಉತ್ಪನ್ನಗಳು ಫಾಸ್ಟುಡ್ ಇತ್ಯಾದಿ ಉತ್ಪನ್ನಗಳನ್ನು ಮತ್ತು ಮಹಿಳೆಯರು ತಯಾರಿಸಿದ ಉತ್ಪನ್ನಗಳನ್ನು ಖರೀದಿಸಿ ಅವರ ಪ್ರತಿಭೆಗೆ ಪ್ರೋತ್ಸಾಹ ನೀಡುವಂತೆ ಅವರು ಪ್ರಕಟಣೆಯಲ್ಲಿ ಕೋ–ರಿದ್ದಾರೆ.

### ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕ; ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ಸಚಿವ ಶಿವರಾಜ ಎಸ್.ತಂಗಡಗಿ ಸಂವಾದ ಸಭೆ

# ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಕಡ್ಡಾಯ ಅನುಷ್ಠಾನಗೊಳಿಸಿ

ಬಳ್ಳಾರಿ: ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ–2024 ಕ್ಕೆ ಫೆ.25 ರಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಈ ಮೂಲಕ ನಾಮಫಲಕಗಳ ಒಟ್ಟಾರೆ ವಿಸ್ತೀರ್ಣದಲ್ಲಿ ಕನ್ನಡ ಭಾಷೆಯನ್ನು ಮೇಲ್ಭಾಗದಲ್ಲಿ ಶೇ.60 ರಷ್ಟು ಪ್ರದರ್ಶಿಸುವಂತೆ ಕ್ರಮ ವಹಿಸಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿಕ ಸಚಿವರಾದ ಶಿವರಾಜ ಎಸ್.ತಂಗಡಗಿ ಅವರು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ಅವರು, ಇಂದು ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ ಕುರಿತು ವಿಕಾಸಸೌಧದಿಂದ ರಾಜ್ಯ ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಸಂವಾದ ಸಭೆ ನಡೆಸಿ ಅವರು ಮಾತನಾಡಿದರು.

ಕರ್ನಾಟಕದಲ್ಲಿ ಕನ್ನಡ ಸಾರ್ವಭೌಮ ಭಾಷೆ, ಆಡಳಿತ ಭಾಷೆ. ಇದರಲ್ಲಿ ಯಾವುದೇ ಆಕ್ಷೇಪ ಇಲ್ಲ. ರಾಜ್ಯ ಸರ್ಕಾರದ ಇಲಾಖೆಗಳು, ಉದ್ಯಮಗಳು, ಸ್ವಾಯತ್ತ ಸಂಸ್ಥೆಗಳು, ಸಹಕಾರ



ಮತ್ತು ಸಾರ್ವಜನಿಕ ಉದ್ಯಮಗಳು, ಬ್ಯಾಂಕುಗಳು, ಇತರ ಹಣಕಾಸು ಸಂಸ್ಥೆಗಳು, ಖಾಸಗಿ ಕೈಗಾರಿಕೆಗಳು ಮತ್ತು ವಿಶ್ವವಿದ್ಯಾಲಯಗಳ ಫಲಕಗಳಲ್ಲಿ ಕಡ್ಡಾಯವಾಗಿ ಕನ್ನಡ ಭಾಷೆಯನ್ನು ಬಳಸುವಂತೆ ಸೂಚಿಸಬೇಕು ಎಂದು ಸಚಿವರು ತಿಳಿಸಿದರು.

ಸಮಗ್ರ ಅನುಷ್ಠಾನಕ್ಕಾಗಿ ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಸಮಿತಿ ಒಳಗೊಂಡಿದ್ದು, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸದಸ್ಯರಾಗಿ ಜಿಪಂ ಸಿಇಒ, ಮಹಾನಗರ ಪಾಲಿಕೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಜಂಟಿ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಇದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಸಂಚಾಲಕರು–ಸದಸ್ಯ ಕಾರ್ಯದರ್ಶಿಯಾಗಿರುತ್ತಾರೆ ಎಂದು ಹೇಳಿದರು.

ಎಲ್ಲಾ ಜಿಲ್ಲೆಗಳಲ್ಲಿ ವಾಣಿಜ್ಯ ಮಳಿಗೆಗಳ ನಾಮಫಲಕಗಳ ಒಟ್ಟಾರೆ ವಿಸ್ತೀರ್ಣದಲ್ಲಿ ಕನ್ನಡ ಭಾಷೆಯನ್ನು ಮೇಲ್ಭಾಗದಲ್ಲಿ ಶೇ.60 ರಷ್ಟು ಮತ್ತು ಶೇ.40 ರಷ್ಟು ಇತರ ಭಾಷೆಯನ್ನು ಕೆಳಭಾಗದಲ್ಲಿ ಬಳಸುವಂತೆ ಸೂಚಿಸಬೇಕು. ಇಲ್ಲದಿದ್ದಲ್ಲಿ ಪರವಾನಿಗೆ ರದ್ದುಗೊಳಿಸಬೇಕು ಹಾಗೂ ದಂಡವೂ ವಿಧಿಸಬೇಕು ಎಂದು ವಿವರಿಸಿದರು.

ಗಡಿಭಾಗದ ಜಿಲ್ಲೆಗಳಲ್ಲಿ ಹೆಚ್ಚು ಕನ್ನಡ ಅನುಷ್ಠಾನಕ್ಕಾಗಿ ಆದ್ಯತೆ ನೀಡಬೇಕು. ಕೂಡಲೇ ಜಿಲ್ಲಾ ಮಟ್ಟದಲ್ಲಿ ಸಭೆ ನಡೆಸಿ, ಕೇಂದ್ರ ಕಚೇರಿಗೆ ವರದಿ ನೀಡಬೇಕು. ಪ್ರಥಮವಾಗಿ ಎಲ್ಲಾ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಕಚೇರಿ, ಕಟ್ಟಡ, ಮನೆ ಹಾಗೂ ಶಾಲಾ – ಕಾಲೇಜುಗಳಿಂದ ಆರಂಭವಾಗಲಿ ಎಂದು ಹೇಳಿದ ಅವರು, ಯಾವುದೇ ಸಂಘಟನೆಗಳ ಹೋರಾಟಕ್ಕೆ ಆಸ್ಪದ ನೀಡಬಾರದು ಎಂದು ಮನವರಿಕೆ ಮಾಡಿದರು.

ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯ ಕಾರ್ಯದರ್ಶಿ ಡಾ.ಎಂ.ಎನ್. ಅಜಯ್ ನಾಗಭೂಷಣ್ ಅವರು ಮಾತನಾಡಿ, ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಉತ್ತಮ ಅವಕಾಶಗಳನ್ನು ಒದಗಿಸುವುದಕ್ಕಾಗಿ ಉಪಬಂಧ ಕಲ್ಪಿಸುವ ಒಂದು ಅಧಿನಿಯಮವಾಗಿದೆ ಎಂದರು.

ಕನ್ನಡ ಭಾಷೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಕನ್ನಡಿಗ–ರಿಗೆ ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಉತ್ತಮ ಅವಕಾಶಗಳನ್ನು ಮತ್ತು ಕಲ್ಯಾಣ ಕ್ರಮಗಳನ್ನು ಕಲ್ಪಿಸುವುದಕ್ಕಾಗಿ ವಿಧೇಯಕವು ಅಂಗೀಕಾರವಾಗಿದ್ದು, ಸಾರ್ವಜನಿಕ ವಲಯದಲ್ಲಿ ಕನ್ನಡ ಭಾಷೆಯ ಬಗ್ಗೆ ಉತ್ತಮ ವಾತಾವರಣ ಸೃಷ್ಟಿಸಬೇಕು ಎಂದು ಸೂಚಿಸಿದರು.

ಈ ವೇಳೆ ವಿಡಿಯೋ ಸಂವಾದದಲ್ಲಿ ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯ ನಿರ್ದೇಶಕರಾದ ಡಾ.ಕೆ.ಧರಣಿದೇವಿ, ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಖನಿಜ ಪ್ರತಿಷ್ಠಾನ ವಿಶೇಷ ಅಧಿಕಾರಿ ಪಿ.ಎಸ್. ಮಂಜುನಾಥ್, ವಾಣಿಜ್ಯ ಮತ್ತು ಕೈಗಾ–ರಿಕೆ ಇಲಾಖೆಯ ಉಪನಿರ್ದೇಶಕ ಸೋಮಶೇಖರ್, ಕನ್ನಡ ಮತ್ತು ಸಂಸ್ಕೃತಿಕ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಡಿಯುಡಿಸಿ ಅಧಿಕಾರಿಗಳು ಸೇರಿದಂತೆ ಇನ್ನಿತರರು ಹಾಜರಿದ್ದರು.

**ಕರ್ನಾಟಕ ಸರ್ಕಾರ**
**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**
**ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ಗೋಕಾಕ**

ಸಂಖ್ಯೆ:ಶಿಅಯೋಗೋ/ಬಾಮೂ.ಗ್ರೂ.ಡಿ/ಸಿ.ಸೇ/ಟೆಂ.ಪ್ರ/2023–24 ದಿನಾಂಕ:07/03/2024

**"ಟೆಂಡರ್ ಪ್ರಕಟಣೆ"**

2024–25 ನೇ ಸಾಲಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗೋಕಾಕ ರವರ ಕಾರ್ಯಾಲಯದಲ್ಲಿಯ ಡಿ ಗ್ರೂಪ್ ಹುದ್ದೆಯ ಸೇವೆಯನ್ನು ಕಾರ್ಮಿಕ ಇಲಾಖೆ ನಿಗಧಿಪಡಿಸಿದ ದರಗಳನ್ವಯ ಹೊರಗುತ್ತಿಗೆ ಆಧಾರದ ಮೇಲೆ ಒದಗಿಸುವ ಸಲುವಾಗಿ ಅರ್ಹ ಬಾಹ್ಯಮೂಲದ ಸಂಸ್ಥೆಗಳಿಂದ ಟೆಂಡರ್ ಗಳನ್ನು ಕರೆಯಲಾಗಿದೆ.

1:ಟೆಂಡರ್ ಪ್ರಕಟಣೆ ದಿನಾಂಕ:07/03/2024, 1:ಟೆಂಡರ ಅರ್ಜಿ ವಿತರಿಸುವ ಸ್ಥಳ:ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಲಕ್ಷ್ಮೀ ದೇವಸ್ಥಾನ ಹತ್ತಿರ ಕೋತ್ವಾಲ ಬಿಲ್ಡಿಂಗ ಗೋಕಾಕ ಜಿಲ್ಲಾ: ಬೆಳಗಾವಿ, 2:ಭರ್ತಿ ಮಾಡಿದ ಟೆಂಡರ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ:06/04/2024 ರಂದು ಕಛೇರಿ ಅವಧಿಯೊಳಗೆ.3:ತಾಂತ್ರಿಕ ಬಿಡ್ ಮತ್ತು ಆರ್ಥಿಕ ಬಿಡ್‌ಗಳನ್ನು (ಲಕೋಟೆ) ತೆರೆಯುವ ಸ್ಥಳ ಮತ್ತು ದಿನಾಂಕ:ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಲಕ್ಷ್ಮೀ ದೇವಸ್ಥಾನ ಹತ್ತಿರ ಕೋತ್ವಾಲ ಬಿಲ್ಡಿಂಗ ಗೋಕಾಕ ಜಿಲ್ಲಾ:ಬೆಳಗಾವಿ ದಿನಾಂಕ:08/04/2024 ರಂದು ಮಧ್ಯಾಹ್ನ 3=00 ಘಂಟೆಗೆ, 4:ಟೆಂಡರಗೆ ಇಟ್ಟ ಅಂದಾಜು ಮೊತ್ತ:206770–00,5:ಟೆಂಡರ್ ನೊಂದಿಗೆ ಪಾವತಿಸ ಬೇಕಾದ ಇ.ಎಮ್.ಡಿ.ಮೊತ್ತ:5000=00.

ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗೋಕಾಕರವರ ಕಾರ್ಯಾಲಯ ಲಕ್ಷ್ಮೀ ದೇವಸ್ಥಾನ ಹತ್ತಿರ ಕೋತ್ವಾಲ ಬಿಲ್ಡಿಂಗ ಗೊಕಾಕ ಇಲ್ಲಿ ಕಚೇರಿ ವೇಳೆಯಲ್ಲಿ ಸಂಪರ್ಕಿಸುವುದು. ದೂರವಾಣಿ ಸಂಖ್ಯೆ : 08332–226365

**ಸಹಿ/–ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು**
**ಗೋಕಾಕ**

DIPR/BGM/RO-NO-1353/KSMCA/2023-24

# ಮುಂಬರುವ ಈ ಲೋಕಸಭಾ ಚುನಾವಣೆಯು,ಯುವಜನರ ಉಜ್ವಲ ಭವಿಷ್ಯ ಮತ್ತು ಭವ್ಯ ಭಾರತದ ನಿರ್ಮಾಣಕ್ಕಾಗಿ: ಕೇಂದ್ರ ಗೃಹ ಸಚಿವ ಮತ್ತು ಸಹಕಾರ ಸಚಿವ ಶ್ರೀ ಅಮಿತ್ ಶಾ

ಮಹಾರಾಷ್ಟ್ರ : ಮಹಾರಾಷ್ಟ್ರ ದ ಜಲಗಾಂವ್ನಲ್ಲಿ ನಡೆದ ಯುವ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ಗೃಹ ಸಚಿವ ಹಾಗೂ ಸಹಕಾರ ಸಚಿವ ಶ್ರೀ ಅಮಿತ್ ಶಾ, ಮುಂಬರುವ ಲೋಕಸಭೆ ಚುನಾವಣೆಯು ಯುವಜನರ ಉಜ್ವಲ ಭವಿಷ್ಯಕ್ಕಾಗಿ ಮತ್ತು ಭವ್ಯ ಭಾರತದ ನಿರ್ಮಾಣಕ್ಕಾಗಿ ಎಂದು ಸ್ಪಷ್ಟಪಡಿಸಿದರು. ಬಿಜೆಪಿಗೆ ಮತ ಹಾಕುವುದೆಂದರೆ ಯುವಕರ ಉಜ್ವಲ ಭವಿಷ್ಯಕ್ಕಾಗಿ, ಭವ್ಯ ಭಾರತದ ನಿರ್ಮಾಣಕ್ಕಾಗಿ ಮತ್ತು ನರೇಂದ್ರ ಮೋದಿ ಅವರನ್ನು ಮೂರನೇ ಬಾರಿಗೆ ಪ್ರಧಾನಿಯನ್ನಾಗಿ ಮಾಡುವುದಕ್ಕಾಗಿ ಮತ ಹಾಕಿದಂತೆ ಎಂದು ಭಾರತೀಯ ಜನತಾ ಪಕ್ಷದ ವರಿಷ್ಠ ನಾಯಕ ಶಾ ಹೇಳಿದರು.

ನಾವು ಸೂಕ್ಷ್ಮವಾಗಿ ಗಮನಿಸಿದರೆ, ಕಳೆದ 10 ವರ್ಷಗಳಲ್ಲಿ ಮೋದಿ ಸರ್ಕಾರವು ಯುವಕರಿಗಾಗಿ ಅಭೂತಪೂರ್ವ ಕ್ರಮಗಳನ್ನು ಕೈಗೊಂಡಿದೆ.

ಬಾಹ್ಯಾಕಾಶದಿಂದ ಹಿಡಿದು ಸೆಮಿಕಂಡಕ್ಟರ್ಗಳವರೆಗೆ, ಡಿಜಿಟಲ್ನಿಂದ ಹಿಡಿದು ಡ್ರೋನ್ಗಳವರೆಗೆ, ೦ಙ ನಿಂದ ಲಸಿಕೆಗಳವರೆಗೆ ಮತ್ತು 5ಉ ಇಂದ ಫಿನ್ಟೆಕ್ವರೆಗೆ ಅಭೂತಪೂರ್ವ ಕಾರ್ಯಗಳನ್ನು ಕೈಗೊಂಡಿದೆ. ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯನ್ನು ನಿರ್ಮಿಸುವುದು, 2035 ರ ವೇಳೆಗೆ ಬಾಹ್ಯಾಕಾಶ ನಿಲ್ದಾಣಗಳನ್ನು ಸ್ಥಾಪಿಸುವುದು, 2036 ರಲ್ಲಿ ಒಲಿಂಪಿಕ್ಸ್ ಆಯೋಜಿಸುವುದು ಮತ್ತು 2040 ರ ವೇಳೆಗೆ ಭಾರತೀಯ ಗಗನಯಾತ್ರಿಗಳನ್ನು ಚಂದ್ರನಿಗೆ ಕಳುಹಿಸುವುದು, ಇವೆಲ್ಲಾ ಪೂರ್ಣಗೊಳ್ಳಬೇಕಿದೆ, ಕಾರಣ ಇವು 'ಮೋದಿ ಗ್ಯಾರಂಟಿ'ಗಳಾಗಿವೆ.

2024ರ ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆ, ಚುನಾವಣಾ ಚಟುವಟಿಕೆಗಳೂ ಹೆಚ್ಚುತ್ತಿವೆ. ಮೋದಿಯವರ ನಾಯಕತ್ವ ಮತ್ತು ಬಿಜೆಪಿ ಗೆಲುವಿನ ಸಂದೇಶವನ್ನು ಮತ್ತೊಮ್ಮೆ ಸಾರಲು ಶಾ ಸಜ್ಜಾಗಿದ್ದಾರೆ. ಭಾರತದ ರಾಜಕೀಯ ಚಾಣಕ್ಯ ಶಾ ಚುನಾವಣೆಗೆ ತಯಾರಿ ನಡೆಸಿದರೆ, ವಿರೋಧ



ಪಕ್ಷದವರೂ ಅವರ ಅಭಿಮಾನಿಗಳಾಗುತ್ತಾರೆ.

ಪ್ರಧಾನಿ ನರೇಂದ್ರ ಮೋದಿಯವರ ನಂತರ, ಚುನಾವಣಾ ರ್ಯಾಲಿಗಳಿಗೆ ಲಕ್ಷಾಂತರ ಜನರನ್ನು ಆಕರ್ಷಿಸುವ ಏಕೈಕ ನಾಯಕನೆಂದರೆ ಅದು ಅಮಿತ್ ಶಾ. ಕಳೆದ 10 ವರ್ಷಗಳಲ್ಲಿ, ಮೋದಿಯವರ ನಾಯಕತ್ವ ಮತ್ತು ಅಮಿತ್ ಶಾ ಅವರ ಸಮರ್ಥ ಮಾರ್ಗದರ್ಶನದಲ್ಲಿ, ದೇಶವು ಅಭೂತಪೂರ್ವ ಪ್ರಗತಿ ಮತ್ತು ಸಮೃದ್ಧಿಯಡೆಗೆ ಪ್ರಯಾಣವನ್ನು ಮಾಡಿದೆ.

ಭಾರತಕ್ಕೆ ಹೊಸ ಗುರುತನ್ನು ನೀಡಿದ ಮೋದಿ-ಶಾ ಜೋಡಿಯ ವಿರುದ್ಧ 'ಅಹಂಕಾರದ ಘಟಬಂಧನ'ದ ನಾಟಕಗಳಿಗೆ ಜಗತ್ತು ಸಾಕ್ಷಿಯಾಗಿದೆ. ಪ್ರಜಾಪ್ರಭುತ್ವ ಇಲ್ಲದ ಒಕ್ಕೂಟ ದೇಶದಲ್ಲಿ ಪ್ರಜಾಪ್ರಭುತ್ವವನ್ನು ಸ್ಥಾಪಿಸಲು ಸಾಧ್ಯವೇ ಇಲ್ಲ.

ಈ ಮೈತ್ರಿಯ ಏಕೈಕ ಗುರಿಯೆಂದರೆ ಸೋನಿಯಾ ಗಾಂಧಿಯವರು ತಮ್ಮ ಮಗ ರಾಹುಲ್ ಗಾಂಧಿಯನ್ನು ಪ್ರಧಾನಿ ಮಾಡುವುದು, ಶರದ್ ಪವಾರ್ ಅವರು ತಮ್ಮ ಮಗಳನ್ನು ಮುಖ್ಯಮಂತ್ರಿ ಮಾಡುವುದು, ಉದ್ಧವ್ ಠಾಕ್ರೆ ತಮ್ಮ ಮಗ ಆದಿತ್ಯ ಠಾಕ್ರೆ ಅವರನ್ನು ಮುಖ್ಯಮಂತ್ರಿ ಮಾಡುವುದು, ಮಮತಾ ಬ್ಯಾನರ್ಜಿ ಅವರ ಸೋದರಳಿಯರನ್ನು ಮುಖ್ಯಮಂತ್ರಿ ಮಾಡುವುದು ಮತ್ತು ಸ್ಟಾಲಿನ್ ಅವರು ತಮ್ಮ ಮಗನನ್ನು ಮುಖ್ಯಮಂತ್ರಿ ಮಾಡುವುದಾಗಿದೆ. ತಮ್ಮ ಕುಟುಂಬವನ್ನು ಹೊರತು ಪಡಿಸಿ ದೇಶದ ಜನರಿಗೆ ಏನನ್ನೂ ಉಳಿಸಿಲ್ಲ ಎಂಬುದು ಇಲ್ಲಿ ಸ್ಪಷ್ಟವಾಗಿದೆ. ಈ ಸನ್ನಿವೇಶದಲ್ಲಿ ಯುವಕರ ಭವಿಷ್ಯ ಮತ್ತು ಅಭಿವೃದ್ಧಿ ಹೊಂದಿದ ರಾಷ್ಟ್ರದ ನಿರ್ಮಾಣಕ್ಕಾಗಿ ನರೇಂದ್ರ ಮೋದಿಯೊಬ್ಬರೇ ಆಯ್ಕೆಯಾಗಿದ್ದಾರೆ.

ಸೋನಿಯಾ-ಮನಮೋಹನ್ ಸರ್ಕಾರದ ಅವಧಿಯಲ್ಲಿ ಯಾರೂ ಬೇಕಾದರೂ ಪಾಕಿಸ್ತಾನದಿಂದ ಒಳನುಸುಳಿ ಭಯೋತ್ಪಾದನೆ ಕೃತ್ಯಗಳನ್ನು ಎಸಗಿದ್ದನ್ನು ಜನರು ನೋಡಿದ್ದಾರೆ.

ಆದರೆ, ಮೋದಿ ಪ್ರಧಾನಿಯಾದಾಗ ಪಾಕಿಸ್ತಾನಕ್ಕೆ ಕೇವಲ10 ದಿನಗಳಲ್ಲಿ ತಕ್ಕ ಉತ್ತರ ನೀಡಿದರು.

ಕಳೆದ 10 ವರ್ಷಗಳಲ್ಲಿ ಮೋದಿ-ಶಾ ಜೋಡಿ ಕಾಶ್ಮೀರವನ್ನು ಭಾರತದ ಅವಿಭಾಜ್ಯ ಅಂಗವನ್ನಾಗಿ ಮಾಡಲು 370 ನೇ ವಿಧಿಯನ್ನು ತೆಗೆದುಹಾಕುವುದು ಮಾತ್ರವಲ್ಲದೆ, ತ್ರಿವಳಿ ತಲಾಖ್‌ಅನ್ನು ರದ್ದುಗೊಳಿಸಿ, ಮಹಿಳಾ ಶಕ್ತಿಯನ್ನು ಗೌರವಿಸುತ್ತಾ, ರಾಜ್ಯ ಮತ್ತು ರಾಷ್ಟ್ರೀಯ ಅಸೆಂಬ್ಲಿಗಳಲ್ಲಿ ಮಹಿಳೆಯರಿಗೆ 33% ಮೀಸಲಾತಿಯನ್ನು ಒದಗಿಸಿದೆ. ಮೋದಿಯವರು ಚಂದ್ರನ ಮೇಲೆ ಚಂದ್ರಯಾನ ಮಿಷನ್ಗಳನ್ನು ಉಡಾವಣೆ ಮಾಡುತ್ತಿದ್ದರೆ, ಸೋನಿಯಾಯವರು 20ನೇ ಬಾರಿಗೆ ರಾಹುಲ್ನನ್ನು ಉಡಾವಣೆ ಮಾಡುತ್ತಿದ್ದರೂ, ಪ್ರತಿ ಬಾರಿಯೂ ರಾಹುಲ್ ವಿಫಲರಾಗುತ್ತಿದ್ದಾರೆ.

ಅಯೋಧ್ಯೆಯ ರಾಮಮಂದಿರದಿಂದ ಕಾಶಿಯ ವಿಶ್ವನಾಥ ಕಾರಿಡಾರ್‌ವರೆಗೆ, 'ನಲ್ ಸೇ ಜಲ್' (ಎಲ್ಲರಿಗೂ ನೀರು)ಯೋಜನೆ, ಉಜ್ವಲ ಅನಿಲ ಯೋಜನೆ, ರೈತರಿಗೆ ಉಚಿತ ಪಡಿತರ, ವೃದ್ಧಾಪ್ಯ ಪಿಂಚಣಿ ಯೋಜನೆ, 'ಒಂದು ಶ್ರೇಣಿ, ಒಂದು ಪಿಂಚಣಿ,' ಕೋವಿಡ್ ಲಸಿಕೆ ಮತ್ತು ಹಲವಾರು ಜನ ಕಲ್ಯಾಣ ಉಪಕ್ರಮಗಳು, 2024 ರಲ್ಲಿ ಮೋದಿಯವರ ನಾಯಕತ್ವದಲ್ಲಿ ದೇಶಭಕ್ತ ಭಾರತೀಯ ಜನತಾ ಪಕ್ಷ ನಿಶ್ಚಿತವಾಗಿ ಗೆಲುವು ಸಾಧಿಸಲಿದೆ ಎಂದು ಹೇಳುವುದರಲ್ಲಿ ತಪ್ಪೇನಿಲ್ಲ.

## ಮತದಾರರು ಪಟ್ಟಿ ಹೆಸರು ಸೇರ್ಪಡೆಗೆ ಅವಕಾಶ

ಧಾರವಾಡ: ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ 72-ಹುಬ್ಬಳ್ಳಿ ಧಾರವಾಡ ಪೂರ್ವ, 73-ಹುಬ್ಬಳ್ಳಿ-ಧಾರವಾಡ ಸೆಂಟ್ರಲ್ ಹಾಗೂ 74-ಹುಬ್ಬಳ್ಳಿ-ಧಾರವಾಡ ಪಶ್ಚಿಮ ವಿಧಾನಸಭಾ ಮತಕ್ಷೇತ್ರಗಳಿಗೆ ಸಂಬಂಧಪಟ್ಟಂತೆ ಈಗಾಗಲೇ ಅಂತಿಮ ಮತದಾರರ ಪಟ್ಟಿಯನ್ನು ಮಾನ್ಯ ಮುಖ್ಯ ಚುನಾವಣಾಧಿಕಾರಿಗಳು ಬೆಂಗಳೂರು ಇವರ ನಿರ್ದೇಶನದನ್ವಯ ಜನವರಿ 22,2024 ರಂದು ಪ್ರಕಟಿಸಲಾಗಿದೆ.

ಅಂತಿಮ ಮತದಾರರ ಪಟ್ಟಿಯನ್ನು ಪ್ರತಿಯೊಬ್ಬ ಮತದಾರರು, ಪರಿಶೀಲಿಸಿ ತಮ್ಮ ಹೆಸರು ಮತ್ತು ತಮ್ಮ ಕುಟುಂಬ ಸದಸ್ಯರುಗಳ ಹೆಸರುಗಳು ಮತದಾರರ ಪಟ್ಟಿಯಲ್ಲಿ ನಮೂದು ಇರುವ ಬಗ್ಗೆ ಖಾತ್ರಿಪಡಿಸಿಕೊಳ್ಳಬೇಕು. ಒಂದು ವೇಳೆ ಹೆಸರು ಮತದಾರರ ಪಟ್ಟಿಯಿಂದ ಬಿಟ್ಟು ಹೋಗಿದ್ದಲ್ಲಿ ಕೂಡಲೇ ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಕೊಳ್ಳಲು ಅವಕಾಶವಿದ್ದು, ಗಿಔಖಿ-ಇಖ ಊಇಐಕಐಖಓಇ ೦ಕಕ ಆನಲೈನ್ ಅರ್ಜಿ ಸಲ್ಲಿಸಿ ಅಥ-'ವಾ ಸಂಬಂಧಪಟ್ಟ ತಮ್ಮ ಮತಗಟ್ಟೆ ಮಟ್ಟದ ಅಧಿಕಾರಿಗಳ ಮೂಲಕ ಅವಶ್ಯಕ ದಾಖಲೆಗಳೊಂದಿಗೆ ತಮ್ಮ ಹೆಸರು ಸೇರ್ಪಡೆ ಮಾಡಿಸಿಕೊಳ್ಳಬಹುದಾಗಿದೆ ಎಂದು ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆ ಆಯುಕ್ತರು ಮತ್ತು ಮತದಾರರ ನೋಂದಣಾಧಿಕಾರಿ ಡಾ. ಈಶ್ವರ ಉಳ್ಳಾಗಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹುಕ್ಕೇರಿ ಎಇಇ ಆಗಿ ಉದಯ ಕಾಂಬಳೆ ನೇಮಕ



ಹುಕ್ಕೇರಿ : ಇಲ್ಲಿನ ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರನ್ನಾಗಿ ಉದಯಕುಮಾರ್ ಕಾಂಬಳೆ ಅವರನ್ನು ನೇಮಕ ಮಾಡಲಾಗಿದೆ.

ಗೋಕಾಕ್ ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಪಿಆರ್ ಇ ಎಇಇ ಆಗಿರುವ ಉದಯಕುಮಾರ್ ಕಾಂಬಳೆ ಅವರನ್ನು ಹುಕ್ಕೇರಿ ಪಿಆರ್ ಇ ಪ್ರಭಾರಿ ಎಇಇಯನ್ನಾಗಿ ನೇಮಿಸಿ ಬೆಳಗಾವಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಆದೇಶ ಹೊರಡಿಸಿದ್ದಾರೆ.

## ಲಾರಿ ಡಿಕ್ಕಿ: ಅಪಘಾತದಲ್ಲಿ ಶಿಕ್ಷಕ ಧಾರುಣ ಸಾವು



ವಿಜಯನಗರ: ಜಿಲ್ಲೆ ಹೂವಿನ ಹಡಗಲಿ ತಾಲೂಕಿನ ಹೊಳಲು ಗ್ರಾಮದ ಬಳಿ ಬೈಕ್‌ಗೆ ಟಿಪ್ಪರ್ ಲಾರಿ ಡಿಕ್ಕಿ ಹೊಡೆದು ಶಿಕ್ಷಕರೊಬ್ಬರು ಮೃತಪಟ್ಟಿರುವ ಘಟನೆ ನಡೆದಿದೆ. ಮಕರಬ್ಬಿ ಸರ್ಕಾರಿ ಶಾಲಾ ಶಿಕ್ಷಕ ಮಹಾಂತೇಶ್ ಗೌಡ (37) ಮೃತ ದುರ್ದೈವಿ. ಮಹಾಂತೇಶ್ ಗೌಡ ಬೈಕ್‌ನಲ್ಲಿ ಶಾಲೆಗೆ ತೆರಳುತ್ತಿದ್ದರು. ಈ ವೇಳೆ ಟಿಪ್ಪರ್ ಲಾರಿ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದೆ. ಪರಿಣಾಮ ಶಿಕ್ಷಕ ಮಹಾಂತೇಶ್ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಹಿರೇಹಡಗಲಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ತಮ್ಮ ಪ್ರೀತಿಯ ಶಿಕ್ಷಕ ಸಾವನ್ನಪ್ಪಿದ ಸುದ್ದಿ ತಿಳಿದು ವಿದ್ಯಾರ್ಥಿಗಳು ಕಣ್ಣೀರಿಟ್ಟಿದ್ದಾರೆ.

## ತುಮಕೂರು ವಿಭಾಗಕ್ಕೆ 6 ಅಶ್ವಮೇಧ ಸೇರಿ ಒಟ್ಟು 15 ಬಸ್ ಹೊಸ ಸೇರ್ಪಡೆ: ಪರಮೇಶ್ವರ್

ತುಮಕೂರು: ತುಮಕೂರು ವಿಭಾಗಕ್ಕೆ 6 ಅಶ್ವಮೇಧ ಕ್ಲಾಸಿಕ್ ಮತ್ತು 9 ಟಾಟಾ ಬಿ.ಎಸ್-6 ಸೇರಿದಂತೆ ಒಟ್ಟು 15 ನೂತನ ಬಸ್ಗಳನ್ನು ನಗರದ ಕೆ.ಎಸ್. ಆರ್ಟಿ.ಸಿ. ಬಸ್ ನಿಲ್ದಾಣದಲ್ಲಿ ಜಿಲ್ಲಾ ಉಸ್ತುವಾರಿ ಹಾಗೂ ಗೃಹ ಸಚಿವ ಡಾ.ಜಿ ಪರಮೇಶ್ವರ್ ಗುರುವಾರ ಲೋಕಾರ್ಪಣೆಗೊಳಿಸಿದರು.



ಬಳಿಕ ಮಾತನಾಡಿದ ಅವರು, ತುಮಕೂರು ವಿಭಾಗವು ದಕ್ಷಿಣ ಕರ್ನಾಟಕದಲ್ಲಿ ಪ್ರಮುಖ ಜಿಲ್ಲಾ ಕೇಂದ್ರವಾಗಿದ್ದು, ಜಿಲ್ಲೆಯಲ್ಲಿ ತುರುವೇಕೆರೆ, ತಿಪಟೂರು, ಶಿರಾ, ಮಧುಗಿರಿ, ಕುಣಿಗಲ್ಗಳಲ್ಲಿ ಹಾಗೂ ತುಮಕೂರು ನಗರವನ್ನೊಳಗೊಂಡಂತೆ ಒಟ್ಟಾರೆ 7 ಘಟಕಗಳು ಕಾರ್ಯನಿರ್ವಹಿಸುತ್ತಿವೆ. ಒಟ್ಟು 602 ವಾಹನಗಳ ಪೈಕಿ 270 ಸಾಮಾನ್ಯ, 299 ವೇಗದೂತ ಮತ್ತು 33 ನಗರ ಸಾರಿಗೆಗಳು ಸಂಚರಿಸುತ್ತಿವೆ ಎಂದು ತಿಳಿಸಿದರು.

ತುಮಕೂರು ಜಿಲ್ಲೆಯಲ್ಲಿ ಸುಮಾರು 2572 ಹಳ್ಳಿಗಳಿದ್ದು, ಇವುಗಳ ಪೈಕಿ 391 ಹಳ್ಳಿಗಳು ರಾಷ್ಟ್ರೀಕೃತ ವಲಯದಲ್ಲಿದ್ದು, ಈ ಹಳ್ಳಿಗಳಿಗೆ ಹಾಗೂ 2181 ರಾಷ್ಟ್ರೀಕೃತವಲ್ಲದ ಹಳ್ಳಿಗಳಿಗೂ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿದೆ. ಕಾರ್ಯಾಚರಣೆಯ ವ್ಯಾಪ್ತಿಯು ತುಮಕೂರು-ಬೆಂಗಳೂರು, ಚಿತ್ರದುರ್ಗ, ಮೈಸೂರು, ಹಾಸನ, ಬಳ್ಳಾರಿ, ದಾವಣಗೆರೆ, ಹುಬ್ಬಳ್ಳಿ ಇತ್ಯಾದಿ ಸ್ಥಳಗಳ ಜೊತೆಗೆ ಅಂತರ್ ರಾಜ್ಯದ ಸ್ಥಳಗಳಾದ ತಮಿಳುನಾಡಿನ ಕೊಯಂಬತ್ತೂರು ಹಾಗೂ ಆಂಧ್ರಪ್ರದೇಶದ ತಿರುಪತಿ & ಮಂತ್ರಾಲಯಗಳನ್ನು ಒಳಗೊಂಡಿರುತ್ತದೆ.

ಸಾರ್ವಜನಿಕ ಹಿತದೃಷ್ಟಿಯಿಂದ ಸಂಸ್ಥೆಯಲ್ಲಿ ಪ್ರಯಾಣಿಕರಿಗೆ ಹಲವಾರು ರಿಯಾಯಿತಿ ಬಸ್ಪಾಸ್ಗಳನ್ನು ಹಾಗೂ 2022-23ನೇ ಸಾಲಿನಲ್ಲಿ 71631 ವಿದ್ಯಾರ್ಥಿ ಬಸ್ ಪಾಸ್ಗಳನ್ನು ವಿತರಿಸಲಾಗಿದೆ. ವಿಕಲಚೇತನರಿಗೆ ರಿಯಾಯಿತಿ ದರದಲ್ಲಿ ಬಸ್ಪಾಸ್ಗಳನ್ನು, ಅಂಧರಿಗೆ ಮತ್ತು ಸ್ವಾತಂತ್ರ ಯೋಧರಿಗೆ ಉಚಿತ ಬಸ್ಪಾಸ್ಗಳನ್ನು ಮತ್ತು ಹಿರಿಯ ನಾಗರಿಕರಿಗೆ ಸಂಸ್ಥೆಯ ವಾಹನದಲ್ಲಿ ಶೇ.25ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆ ಎಂದರು.

ಕರ್ನಾಟಕ ರಾಜ್ಯಾದ್ಯಂತ ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯ ನೀಡಲಾಗಿದ್ದು, ನಗರ ಸಾರಿಗೆ, ಸಾಮಾನ್ಯ ವೇಗದೂತ ಸಾರಿಗೆಗಳಲ್ಲಿ ಮಾತ್ರ ಮಹಿಳೆಯರು ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣಿಸಲು ಅವಕಾಶ ನೀಡಲಾಗಿದೆ, ಜೂನ್ 11, 2023ರಿಂದ ಪ್ರಾರಂಭವಾದ ಶಕ್ತಿ ಯೋಜನೆಯಡಿಯಲ್ಲಿ ಪ್ರಸಕ್ತ ಫೆಬ್ರವರಿ 2024 ಮಾಹೆವರೆಗೆ 485.01 ಲಕ್ಷ ಮಹಿಳಾ ಪ್ರಯಾಣಿಕರು ತುಮಕೂರು ಹಾಗೂ ರಾಜ್ಯದ ಇತರೆ ಸ್ಥಳಗಳಿಗೆ ಪ್ರಯಾಣಿಸಿದ್ದು, ಇದರಿಂದ ತುಮಕೂರು ವಿಭಾಗಕ್ಕೆ 13987.31 ಲಕ್ಷ ರೂ. ಆದಾಯ ಗಳಿಸಿದೆ ಎಂದು ತಿಳಿಸಿದರು.

ಸ್ಮಾರ್ಟ್ ಸಿಟಿ ಅಭಿವೃದ್ಧಿ ಯೋಜನೆಯಡಿ ಅಂದಾಜು 82.89 ಕೋಟಿ ರೂ.ಮೊತ್ತದಲ್ಲಿ ನಿರ್ಮಾಣಗೊಂಡಿರುವ ಮೊದಲ ಹಂತದ ಕಾಮಗಾರಿ 'ಡಿ.ದೇವರಾಜು ಅರಸು ಬಸ್ ನಿಲ್ದಾಣ'ವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನವರಿ 29ರಂದು ಉದ್ಘಾಟಿಸಿದ್ದು, ಉಳಿದ ಕಾಮಗಾರಿಯು ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಶ್ರೀನಿವಾಸ್ ನೂತನ ಬಸ್ ಚಾಲನೆ ಮಾಡಿದರು.

ಕಾರ್ಯಕ್ರಮದಲ್ಲಿ ಸಹಕಾರ ಸಚಿವ ಕೆ.ಎನ್.ರಾಜಣ್ಣ, ಶಾಸಕ ಜಿ.ಬಿ ಜ್ಯೋತಿ ಗಣೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ., ಅಪರ ಜಿಲ್ಲಾಧಿಕಾರಿ ಶಿವಾನಂದ್ ಬಿ.ಕರಾಳೆ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮರಿಯಪ್ಪ, ಮಹಾನಗರ ಪಾಲಿಕೆ ಆಯುಕ್ತೆ ಅಶ್ವಿಜ ಬಿ.ವಿ., ವಿಭಾಗೀಯ ನಿಯಂತ್ರಣಾಧಿಕಾರಿ ಚಂದ್ರಶೇಖರ್, ತಹಶೀಲ್ದಾರ್ ಸಿದ್ದೇಶ್ ಎಮ್. ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಮಾ.16 ರಂದು ರಾಷ್ಟ್ರೀಯ ಲೋಕ ಅದಾಲತ್

ಬಳ್ಳಾರಿ: ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ರಾಷ್ಟ್ರೀಯ ಲೋಕ ಅದಾಲತ್ನ್ನು ಮಾ.16 ರಂದು ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ನಡೆಸಲಾಗುವುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಎಸ್. ಹೆಚ್.ಪುಷ್ಪಾಂಜಲಿ ದೇವಿ ಅವರು ತಿಳಿಸಿದ್ದಾರೆ.

ಮಾ.09 ರಂದು ನಡೆಯಬೇಕಿದ್ದ ರಾಷ್ಟ್ರೀಯ ಲೋಕ ಅದಾಲತ್ನ್ನು, ಮಾ.16 ಕ್ಕೆ ಮುಂದೂಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ನ್ಯಾಯಾಲಯದಲ್ಲಿ ಮೆಗಾ-ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳು ಸುವರ್ಣ ಅವಕಾಶವಾಗಿದೆ.

*ವಿಶೇಷ ಸೂಚನೆ:*

ಪ್ರತಿದಿನ ಎಲ್ಲಾ ನ್ಯಾಯಾಲಯಗಳಲ್ಲಿ ಮೆಗಾ-ಲೋಕ್ ಅದಾಲತ್ಗೆ ಸಂಬಂಧಿಸಿದಂತೆ ಪೂರ್ವಭಾವಿ ಬೈಠಕ್ಗಳು ನಡೆಯುತ್ತಿರುತ್ತವೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿ ಅಥವಾ ದೂ.08392-278077 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳೂ ಆದ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮತದಾನ ಪ್ರಮಾಣ ಹೆಚ್ಚಳಕ್ಕೆ ವಿಶೇಷ ಕಾಳಜಿ ವಹಿಸುವಂತೆ ಹೆಚ್ಚುವರಿ ಮುಖ್ಯ ಚುನಾವಣಾಧಿಕಾರಿ ಎಂ.ಕುರ್ಮಾರಾವ್ ಸೂಚನೆ

ಬಳ್ಳಾರಿ: ಬರುವ ಲೋಕಸಭಾ ಚುನಾವಣೆ ರಾಜ್ಯದ ಮತದಾನ ಪ್ರಮಾಣ ಹೆಚ್ಚಿಸಲು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಎಲ್ಲಾ ಮತದಾರರು ಸಕ್ರಿಯವಾಗಿ ಪಾಲ್ಗೊಳ್ಳುವಂತೆ ಕ್ರಮವಹಿಸಬೇಕು ಎಂದು ಹೆಚ್ಚುವರಿ ಮುಖ್ಯ ಚುನಾವಣಾಧಿಕಾರಿ ಎಂ.ಕುರ್ಮಾರಾವ್ ಅವರು ಎಲ್ಲಾ ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿಗಳಾದ ಪಂಚಾಯತ್ ಸಿಇಓ ಅಧಿಕಾರಿಗಳಿಗೆ ಸೂಚಿಸಿದರು.



ಅವರು ಇಂದು ಲೋಕಸಭೆ ಚುನಾವಣೆ ಸಂಬಂಧ ಮತದಾನ ಪ್ರಮಾಣ ಹೆಚ್ಚಳಕ್ಕೆ ಸಂಬಂಧಿಸಿದಂತೆ ರಾಜ್ಯದ ಎಲ್ಲಾ ಜಿಲ್ಲೆಯ ಸ್ವೀಪ್ ನೋಡೆಲ್ ಅಧಿಕಾರಿಗಳಾದ ಜಿಪಂ ಸಿಇಓ ಅಧಿಕಾರಿಗಳ ಜೊತೆ ವಿಡಿಯೋ ಸಂವಾದದ ಮೂಲಕ ಸಭೆ ನಡೆಸಿ ಮಾತನಾಡಿದರು.

ರಾಜ್ಯದಲ್ಲಿ ಮತದಾನ ಮೌಲ್ಯ ಕುರಿತು ಜನ ಸಾಮಾನ್ಯರಲ್ಲಿ ಜಾಗೃತಿ ಮೂಡಿಸಬೇಕು. ಮತದಾನ ಪ್ರಕ್ರಿಯೆಯಲ್ಲಿ ಅರ್ಹ ಮತದಾರರು ತಪ್ಪದೇ ಭಾಗವಹಿಸುವಂತೆ ಹಾಗೂ ಜಿಲ್ಲೆವಾರು ಮತದಾನ ಪ್ರಮಾಣ ಹೆಚ್ಚಾಗುವಂತೆ ಕ್ರಮವಹಿಸಬೇಕು ಎಂದರು.

ಸಾರ್ವಜನಿಕರಿಗೆ ಮಾದರಿ ಮತಗಟ್ಟೆ ಕೇಂದ್ರಗಳ ಬಗ್ಗೆ ಚಿತ್ರಣ ಬಿಂಬಿಸಲು ಪ್ರಾತ್ಯಕ್ಷಿಕೆ ತೋರಿಸಬೇಕು. ಇದಕ್ಕೆ ಕಾರ್ಯಯೋಜನೆ ರೂಪಿಸಿಕೊಳ್ಳಬೇಕು ಎಂದು ಸೂಚಿಸಿದರು.

ಆಯಾ ಜಿಲ್ಲಾ ನೋಡಲ್ ಅಧಿಕಾರಿಗಳು ಜಿಲ್ಲೆಯ ಎಲ್ಲಾ ಮತದಾರರ ಪಟ್ಟಿಯ ಮಾಹಿತಿ ಪಡೆದುಕೊಂಡು, ಈ ಹಿಂದೆ ಮತದಾನದಿಂದ ಹೊರಗುಳಿದ ಪ್ರತಿಯೊಬ್ಬ ಮತದಾರರು ತಮ್ಮ ಮತ ಚಲಾಯಿಸುವಂತೆ ದೂರವಾಣಿ ಕರೆ ಮೂಲಕ, ಮೊಬೈಲ್ ಸಂದೇಶ ರವಾನೆ ಮುಖಾಂತರ ಮನವೊಲಿಸಬೇಕು ಎಂದು ಹೇಳಿದರು. ಮುಖ್ಯವಾಗಿ 18 ವರ್ಷ ಮೇಲ್ಪಟ್ಟ ಹೊಸದಾಗಿ ನೋಂದಾಯಿಸಿಕೊಂಡ ಯುವ ಜನತೆ ತಪ್ಪದೇ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸುವಂತೆ ನಿಗಾವಹಿಸಬೇಕು. ಇನ್ನುಳಿದಂತೆ ತೃತೀಯ ಲಿಂಗಿಗಳು ಮತದಾನದಿಂದ ಹೊರ ಗುಳಿಯಬಾರದು ಎಂದರು.

ನಗರ ಭಾಗಗಳಲ್ಲಿ ಕಡೆ ಹೆಚ್ಚು ಗಮನಹರಿಸುವ ಮೂಲಕ ಮತದಾನ ಕುರಿತು ಅರಿವು ಮೂಡಿಸಿ, ಮತದಾನ ಹೆಚ್ಚಾಗುವಲ್ಲಿ ಕಾಳಜಿ ವಹಿಸಬೇಕು. ಹೊಸ ಮತಗಟ್ಟೆ ಕೇಂದ್ರಗಳಲ್ಲಿ ಹೆಚ್ಚು ಮತದಾನವಾಗುವಂತೆ ಗಮನಹರಿಸಬೇಕು ಎಂದು ನಿರ್ದೇಶನ ನೀಡಿದರು. ಸಂವಾದದಲ್ಲಿ ಇನ್ನಿತರೆ ಚುನಾವಣಾ ಮಾರ್ಗಸೂಚಿಗಳ ಕುರಿತು ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿಯೂ ಆದ ಜಿಪಂ ಸಿಇಓ ರಾಹುಲ್ ಶರಣಪ್ಪ ಸಂಕನೂರ, ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎ.ಕೆ ಜಲಾಲಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ದಿವಾಕರ್, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಜಿಲ್ಲಾ ಮಕ್ಕಳ ರಕ್ಷಣಾ ಘಟಕ; ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಜರುಗಿದ ಒಂದು ದಿನದ ತರಬೇತಿ ಕಾರ್ಯಗಾರ

ಧಾರವಾಡ: ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಧಾರವಾಡ ಇವರ ಸಂಯುಕ್ತಾಶ್ರಯದಲ್ಲಿ "ಮಕ್ಕಳಿಗೆ ಸಂಬಂಧಿಸಿದ ವಿವಿಧ ಇಲಾಖಾ ಭಾಗಿದಾರರುಗಳಿಗೆ" ಒಂದು ದಿನದ ತರಬೇತಿ ಕಾರ್ಯಾಗಾರವನ್ನು ಆಲೂರು ವೆಂಕಟರಾವ್ ಸಭಾಭವನದಲ್ಲಿ ಮಾರ್ಚ 7 -2024 ರಂದು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸುತ್ತಾ ಗೌರವಾನ್ವಿತ ಶ್ರೀ ಪರಶುರಾಮ ದೊಡ್ಡಮನಿ, ಮಾನ್ಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಇವರು ಮಾತನಾಡಿ ಜಿಲ್ಲೆಯಲ್ಲಿ ತಾಲೂಕು ಮಟ್ಟದ ಅಧಿಕಾರಿಗಳಿಗೆ ಇಂತಹ ಕಾರ್ಯಕ್ರಮಗಳನ್ನು ಆಯೋಜನೆ ಮಾಡಿರುವುದು ತಂಬಾ ಉಪಯುಕ್ತ. ಕಳೆದ ವರ್ಷ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಅಂಕಿ ಅಂಶಗಳ ಪ್ರಕಾರ 11 ಲಕ್ಷ 13 ಸಾವಿರ ಮಹಿಳೆ ಮತ್ತು ಮಕ್ಕಳು ನಾಪತ್ತೆಯಾಗಿರುವುದು ತುಂಬಾ ಆಘಾತಕಾರಿ ವಿಷಯವಾಗಿದೆ. ನಮ್ಮ ಮನೆಯ ಹೆಣ್ಣು ಮಕ್ಕಳ ಕುರಿತು ನಾವು ಯಾವ ರೀತಿ ಕಾಳಜಿ ವಹಿಸುತ್ತೇವೆಯೋ ಅದೇ ರೀತಿ ಸಮಾಜದಲ್ಲಿರುವ ಮಹಿಳೆ ಮತ್ತು ಮಕ್ಕಳ ಕುರಿತು ಕಾಳಜಿ ವಹಿಸುವುದು ನಮ್ಮ ನಿಮ್ಮೆಲ್ಲರ ಜವಾಬ್ದಾರಿಯಾಗಿದೆ. ಬಾಲ್ಯ ವಿವಾಹ ಮತ್ತು ಬಾಲಗರ್ಭಿಣಿಯರ ಸಂಖ್ಯೆ ಹೆಚ್ಚಾಗುತ್ತಿದ್ದು, ಈ ಕುರಿತು ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯುತ ಕೆಲಸವನ್ನು ನಿರ್ವಹಿಸಿ ಇವುಗಳನ್ನು ತಡೆಗಟ್ಟುವಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದು ಅತೀ ಅವಶ್ಯವಾಗಿದೆ. ಇತ್ತೀಚಿನ ದಿನಗಳಲ್ಲಿ ವರದಿಯನ್ನು ಆಧರಿಸಿ ಭ್ರೂಣ ಹತ್ಯೆ ಪ್ರಕರಣಗಳು ಕಂಡು ಬಂದಿದ್ದು, ಇದು ಮನುಷ್ಯ ಕುಲಕ್ಕೆ ತಲೆತಗ್ಗಿಸುವ ವಿಷಯವಾಗಿದೆ. ಸಮಾಜದಲ್ಲಿರುವ ಮಕ್ಕಳನ್ನು ಅಪಹರಿಸಿ ಅವರನ್ನು ಅಂಗ ವೈಕಲ್ಯರನ್ನಾಗಿ ಮಾಡಿ ಭಿಕ್ಷೆ ಬೇಡಲು ಹಚ್ಚಿ ಬಂದಂತಹ ಹಣದಿಂದ ಮಧ್ಯವರ್ತಿಗಳು ಐಶಾರಾಮಿ ಜೀವನವನ್ನು ನಡೆಸುತ್ತಿದ್ದಾರೆ. ಹೆಣ್ಣು ಮಕ್ಕಳ ಬಡತನವನ್ನು



ದುರುಪಯೋಗ ಪಡಿಸಿಕೊಂಡು ರೆಡ್ ಲೈಟ್ ಏರಿಯಾಗೆ ಕಳುಹಿಸಿ ಹೆಣ್ಣು ಮಕ್ಕಳ ಜೀವನವನ್ನು ಹಾಳು ಮಾಡುತ್ತಿದ್ದಾರೆ. ಇವುಗಳನ್ನು ತಡೆಯುವಲ್ಲಿ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮಗಳನ್ನು ವಹಿಸಬೇಕು ಎಂದು ಸೂಚಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಸ್ಥಾನವನ್ನು ಅಲಂಕರಿಸಿದ ಶ್ರೀಮತಿ ಶುಭಾ ಪರೀಟ ಸದಸ್ಯರು ಮಕ್ಕಳ ಕಲ್ಯಾಣ ಸಮಿತಿ, ಧಾರವಾಡ ಇವರು ಮಕ್ಕಳ ವಿಷಯವು ಕೇವಲ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಮಾತ್ರ ಸೀಮಿತವಾಗಿರುವುದಿಲ್ಲ. ಇಲ್ಲಿ ಎಲ್ಲ ಇಲಾಖೆಯವರ ಪಾತ್ರ ಬಹು ಮುಖ್ಯವಾಗಿದೆ. ತಾಲೂಕಾ ಮಟ್ಟದ ಅಧಿಕಾರಿಗಳು ತಮ್ಮ ತಮ್ಮ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಿದರೆ, ಆ ಪ್ರಕರಣಗಳು ಮಕ್ಕಳ ಕಲ್ಯಾಣ ಸಮಿತಿ ಮುಂದೆ ಬರುವ ಅವಶ್ಯಕತೆ ಇರುವುದಿಲ್ಲ. ಮಕ್ಕಳ ರಕ್ಷಣೆಯಲ್ಲಿ ಸಮನ್ವಯತೆ ತುಂಬಾ ಅವಶ್ಯಕತೆಯಿದ್ದು, ಮಕ್ಕಳ ಭವಿಷ್ಯವನ್ನು ನಮ್ಮ ದೇಶದ ಭವಿಷ್ಯವೆಂದು ತಿಳಿದು ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಇನ್ನೋರ್ವ ಮುಖ್ಯ ಅತಿಥಿ ಸ್ಥಾನವನ್ನು ಅಲಂಕರಿಸಿದ ಶ್ರೀಮತಿ ರಾಧಾ ಕಲಾಲ ಸದಸ್ಯರು ಮಕ್ಕಳ ಕಲ್ಯಾಣ ಸಮಿತಿ, ಧಾರವಾಡ ಇವರು ಮಾತನಾಡಿ 1992 ರಲ್ಲಿ ನಾವು ಮಕ್ಕಳ ಹಕ್ಕುಗಳ ಒಡಂಬಡಿಕೆಗೆ ಸಹಿ ಮಾಡಿ ಮಕ್ಕಳಿಗೆ ತಮ್ಮ ಹಕ್ಕುಗಳನ್ನು ನೀಡುತ್ತ ಬಂದಿದ್ದೇವೆ. ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರತಿಯೊಬ್ಬ ಅಧಿಕಾರಿಯು ಬಾಲ ನ್ಯಾಯ ಕಾಯ್ದೆ 2015ರ ಕುರಿತು ತಿಳಿದುಕೊಳ್ಳುವುದು ತುಂಬಾ ಮುಖ್ಯವಾಗಿದೆ. ಮಕ್ಕಳಿಗಾಗಿ ಹಲವಾರು ಕಾಯ್ದೆಗಳು ಜಾರಿಯಲ್ಲಿದ್ದರೂ ಸಹಿತ ಅವುಗಳನ್ನು ಸರಿಯಾದ ರೀತಿಯಲ್ಲಿ ಅನುಷ್ಠಾನಗೊಳಿಸುವುದು ಅತೀ ಅವಶ್ಯವಾಗಿದೆ, ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷ ಸ್ಥಾನವನ್ನು ಅಲಂಕರಿಸಿದ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ನೀತಾ ವಾಡಕರ ಅವರು ಮಾತನಾಡಿ, ಹಲವಾರು ವರ್ಷಗಳ ಹಿಂದಿನ ಅಂಕಿ ಸಂಖ್ಯೆಗಳನ್ನು ಪರಿಗಣಿಸಿದರೆ ಪ್ರತಿ ವರ್ಷವೂ ಮಕ್ಕಳಿಗೆ ಸಂಬಂಧಿಸಿದ ಪ್ರಕರಣಗಳು ಮುಖ್ಯವಾಗಿ ಬಾಲ್ಯ ವಿವಾಹವು ಕಡಿಮೆಯಾಗುತ್ತಾ ಬರುತ್ತಿದ್ದು, ಇದಕ್ಕೆ ಇಂತಹ ತರಬೇತಿಗಳೇ ಕಾರಣ. ಸದರಿ ತರಬೇತಿಯನ್ನು ನಮ್ಮ ಜಿಲ್ಲೆಯಲ್ಲಿ ಅಧಿಕಾರಿಗಳಿಗೆ ಹಮ್ಮಿಕೊಂಡಿದ್ದು ತುಂಬಾ ಉಪಯುಕ್ತವಾಗಿದೆ ಎಂದು ತಿಳಿಸಿದರು. ಈ ದಿನ ಕೈಗೊಂಡ ಕಾರ್ಯಕ್ರಮ ಮಕ್ಕಳ ಕ್ಷೇತ್ರಕ್ಕೆ ತುಂಬಾ ಅನುಕೂಲವಾಗಿದ್ದು ಸದರಿ ತರಬೇತಿಯ ಉಪಯೋಗವನ್ನು ತಾವೆಲ್ಲರು ಪಡೆಯಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಹರೀಶ ಜೋಗಿ, ಕಾರ್ಯಕ್ರಮ ವ್ಯವಸ್ಥಾಪಕರು, ಯುನಿಸೆಫ್ ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾ ಯೋಜನೆ ಕೊಪ್ಪಳ ಇವರು ಬಾಲನ್ಯಾಯ ಕಾಯ್ದೆ-2015, ಬಾಲ್ಯ ವಿವಾಹ ನಿಷೇಧ ಕಾಯ್ದೆ-2006, ಪೋಕ್ಸೋ ಕಾಯ್ದೆ-2012,ದತ್ತು ಮಾರ್ಗಸೂಚಿ-2022 ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಅಧೀಕ್ಷಕರು, ಸರ್ಕಾರಿ ವೀಕ್ಷಣಾಲಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಭಾಗವಹಿಸಿದರು.

# ಬರಗಾಲ-ರೈತರ ಸಾಲ ವಸೂಲಾತಿಗೆ ಬಲವಂತದ ಕ್ರಮ ಬೇಡ: ಜಿಲ್ಲಾ ಉಸ್ತುವಾರಿ ಸಚಿವ ಸತೀಶ್

ಬೆಳಗಾವಿ: ರಾಜ್ಯದಾದ್ಯಂತ ಬರಗಾಲ ಇರುವ ಕಾರಣ ರೈತರಿಂದ ಯಾವುದೇ ಸಾಲ ವಸೂಲಾತಿಗೆ ಬಲವಂತದ ಕ್ರಮವಹಿಸಬಾರದು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಬ್ಯಾಂಕು ಹಾಗೂ ಸಹಕಾರಿ ಪತ್ತಿನ ಸಂಘಗಳಿಗೆ ನಿರ್ದೇಶನ ನೀಡಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಗುರುವಾರ(ಮಾ.7) ನಡೆದ ಪ್ರಮುಖ ಸಹಕಾರಿ ಪತ್ತಿನ ಸಂಘಗಳು ಮತ್ತು ಬ್ಯಾಂಕ್ ಅಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಬರಗಾಲದಿಂದ ರೈತರು ಸಂಕಷ್ಟದಲ್ಲಿದ್ದಾರೆ. ಆದ್ದರಿಂದ ಸಾಲ ವಸೂಲಾತಿಗೆ ಯಾವುದೇ ರೀತಿಯ ಒತ್ತಡ ಹೇರಬಾರದು. ಇದಲ್ಲದೇ ರೈತರ ಖಾತೆಗೆ ಜಮೆಯಾಗುವ ವೃದ್ಧಾಪ್ಯ ವೇತನ ಅಥವಾ ಯಾವುದೇ ಸರಕಾರಿ ಸೌಲಭ್ಯಗಳ ಹಣವನ್ನು ಸಾಲದ ಕಂತುಗಳಿಗೆ ಹೊಂದಾಣಿಕೆ ಮಾಡಬಾರದು ಎಂದು ತಿಳಿಸಿದರು.



ಸರಕಾರದಿಂದ ರೈತರಿಗೆ ನೀಡಲಾಗುವ ಶೂನ್ಯ ಬಡ್ಡಿ ಸಾಲಸೌಲಭ್ಯಗಳನ್ನು ಹೆಚ್ಚು ಹೆಚ್ಚು ಜನರಿಗೆ ತಲುಪಿಸಬೇಕು ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ಅಧಿಕಾರಿಗಳಿಗೆ ತಿಳಿಸಿದರು.

**3 ತಿಂಗಳು ಸಾಲ ವಸೂಲಾತಿಗೆ ಕ್ರಮ ಬೇಡ:**

ಇದೇ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಇರುವುದರಿಂದ ಮುಂದಿನ 3 ತಿಂಗಳವರೆಗೆ ಬಲವಂತದ ಸಾಲ ವಸೂಲಾತಿ ಮಾಡಬಾರದು ಮತ್ತು ರೈತರಿಗೆ ನೋಟೀಸು ಜಾರಿಗೊಳಿಸಿ ತೊಂದರೆ ನೀಡಬಾರದು ಎಂದು ಬ್ಯಾಂಕಿನ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬ್ಯಾಂಕುಗಳು ಮಾತ್ರವಲ್ಲದೇ ಖಾಸಗಿ ಲೇವಾದೇವಿದಾರರಿಂದ ಕೂಡ ಯಾವುದೇ ರೀತಿಯ ತೊಂದರೆಯಾಗದಂತೆ ಎಚ್ಚರಿಕೆ ವಹಿಸುವಂತೆ ಅವರು ತಿಳಿಸಿದರು.

ಬೆಳಗಾವಿ (ಉತ್ತರ) ವಿಧಾನಸಭಾ ಮತಕ್ಷೇತ್ರದ ಶಾಸಕರಾದ ಆಸಿಫ್(ರಾಜು) ಸೇಠ್, ಸಹಕಾರಿ ಸಂಘಗಳ ಜಂಟಿ ನಿಬಂಧಕರಾದ ಸುರೇಶ್ ಗೌಡ, ಸಹಕಾರಿ ಸಂಘಗಳ ಉಪ ನಿಬಂಧಕರಾದ ಮಣಿ ಎಂ.ಎನ್. ಹಾಗೂ ಜಿಲ್ಲಾ ಲೀಡ್ ಬ್ಯಾಂಕಿನ ವ್ಯವಸ್ಥಾಪಕರಾದ ಪ್ರಶಾಂತ ಕುಲಕರ್ಣಿ ಹಾಗೂ ವಿವಿಧ ರೈತ ಸಂಘಗಳ ಸದಸ್ಯರು, ಪದಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಉತ್ತರ ಕನ್ನಡ ಕ್ಷೇತ್ರದಲ್ಲಿ ಸಂಚಲನ ಸೃಷ್ಟಿಸಿದ ನಿಂಬಾಳ್ಕರ್



ಬೆಳಗಾವಿ: ಉತ್ತರ ಕನ್ನಡ ಲೋಕಸಭಾ ಮತಕ್ಷೇತ್ರದಲ್ಲಿ ಇದೀಗ ಕಾಂಗ್ರೆಸ್ ಮಾಜಿ ಶಾಸಕಿ ಡಾ. ಅಂಜಲಿ ನಿಂಬಾಳ್ಕರ್ ಸಂಚಲನ ಸೃಷ್ಟಿಸಿದ್ದಾರೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಖಾನಾಪುರ ಮತಕ್ಷೇತ್ರದಿಂದ ಸ್ಪರ್ಧಿಸಿ ಸೋಲು ಕಂಡಿದ್ದ ಅವರಿಗೆ ಈ ಸಲ ಉತ್ತರ ಕನ್ನಡ ಲೋಕಸಭಾ ಮತಕ್ಷೇತ್ರದಲ್ಲಿ ಕಾಂಗ್ರೆಸ್ ಟಿಕೆಟ್ ಸಿಗುವುದು ಬಹುತೇಕ ಖಚಿತ ಎನಿಸಿದೆ. ಹೀಗಾಗಿ ಅವರು ಉತ್ತರಕನ್ನಡ ಜಿಲ್ಲೆ ಸೇರಿದಂತೆ ಕಿತ್ತೂರು ಮತ್ತು ಖಾನಾಪುರ ಮತಕ್ಷೇತ್ರಗಳಲ್ಲಿ ಎಡಬಿಡದೆ ಸಂಚಾರ ನಡೆಸಿ ಮತದಾರರ ಮನ ಗೆಲ್ಲುವ ಪ್ರಯತ್ನ ನಡೆಸಿದ್ದಾರೆ. ಕಾಂಗ್ರೆಸ್ ಪ್ರಥಮ ಪಟ್ಟಿಯಲ್ಲೇ ಅವರ ಹೆಸರು ಘೋಷಣೆಯಾಗುವ ಸಾಧ್ಯತೆ ಇದೆ. ಜನರ ಜೊತೆ ನಿಕಟ ನಂಟು ಹೊಂದಿರುವ ಕಾರಣಕ್ಕೆ ಹಾಗೂ ಕಾಂಗ್ರೆಸ್ ಪಕ್ಷದಲ್ಲಿ ಮಹಿಳೆ ಎಂಬ ಕಾರಣಕ್ಕೆ ಈ ಬಾರಿ ಉತ್ತರ ಕನ್ನಡ ಮತಕ್ಷೇತ್ರದಲ್ಲಿ ಮಾರ್ಗರೆಟ್ ಆಳ್ವ ನಂತರ ಅವರಿಗೆ ಕಾಂಗ್ರೆಸ್ ಪಕ್ಷ ಮನ್ನಣೆ ನೀಡುವುದು ಬಹುತೇಕ ನಿಚ್ಚಳವಾಗಿದೆ.

ಕೈ ಟಿಕೆಟ್ ನೀಡಿ ಎಂದು ಅರ್ಜಿ ಹಾಕಿಲ್ಲ: ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಲು ನನಗೆ ಆಸಕ್ತಿಯಿದ್ದು, ಪಕ್ಷದ ತೀರ್ಮಾನಕ್ಕೆ ಬದ್ಧನಿದ್ದೇನೆ ಎಂದು ಮಾಜಿ ಶಾಸಕಿ ಅಂಜಲಿ ನಿಂಬಾಳ್ಕರ್ ಸ್ಪಷ್ಟಪಡಿಸಿದರು.

ಶಿರಸಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಟಿಕೆಟ್ ನೀಡಿ ಎಂದು ಅರ್ಜಿ ಹಾಕಿಲ್ಲ. ಕಾಂಗ್ರೆಸ್‌ನ ಮೊದಲ ಪಟ್ಟಿ ಒಂದು ವಾರದೊಳಗೆ ಬಿಡುಗಡೆಯಾಗಲಿದೆ. ಯಾರಿಗೆ ಟಿಕೆಟ್ ನೀಡಿದರೂ, ನಾವೆಲ್ಲರೂ ಒಗ್ಗಟ್ಟಾಗಿ ನಮ್ಮ ಪಕ್ಷದ ಅಭ್ಯರ್ಥಿ ಗೆಲುವಿಗೆ ಶ್ರಮಿಸುತ್ತೇವೆ. ಆದರೆ ನನಗೆ ಉತ್ತರ ಕನ್ನಡ ಲೋಕಸಭೆ ಕ್ಷೇತ್ರದ ಅಭ್ಯರ್ಥಿಯಾಗಲು ಆಸಕ್ತಿಯಿದೆ.

ಉತ್ತರ ಕನ್ನಡ ಲೋಕಸಭಾ ಕ್ಷೇತ್ರವು 8 ವಿಧಾನಸಭಾ ಕ್ಷೇತ್ರ ಒಳಗೊಂಡಿದೆ. ಉತ್ತರ ಕನ್ನಡ ಜಿಲ್ಲೆಯ ನಾಲ್ಕು ಹಾಗೂ ಕಿತ್ತೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಶಾಸಕರು ಆಯ್ಕೆಯಾಗಿದ್ದಾರೆ. ಎಲ್ಲರೂ ಸೇರಿ ಚುನಾವಣೆ ಎದುರಿಸುತ್ತೇವೆ. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯ ಗೆಲುವಿಗೆ ನಾವೆಲ್ಲ ಒಟ್ಟಾಗಿ ಶ್ರಮಿಸುವುದಾಗಿ ಅವರು ತಿಳಿಸಿದರು.

# ಗಡಿನಾಡ ಚೇತನ ಪ್ರಶಸ್ತಿ ಪುರಸ್ಕೃತ ಪ್ರೊ. ಬಿ.ಎಸ್. ಗವಿಮಠ ಅವರಿಗೆ ಸಾಹಿತಿಗಳಿಂದ ಸನ್ಮಾನ

ಬೆಳಗಾವಿ: ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿಪ್ರಾಧಿಕಾರದಿಂದ ನೀಡುವ 'ಗಡಿನಾಡ ಚೇತನ ರಾಜ್ಯ ಪ್ರಶಸ್ತಿಗೆ ಆಯ್ಕೆಯಾದ

ಬೆಳಗಾವಿಯ ಹಿರಿಯ ಸಾಹಿತಿ, ರಂಗಕರ್ಮಿ, ಶಿಕ್ಷಣ ತಜ್ಞ, ಕೆಎಲ್‌ಇ ಪ್ರಸಾರಾಂಗದ ವಿಶ್ರಾಂತ ನಿರ್ದೇಶಕರಾದ ಪ್ರೊ.ಬಿ.ಎಸ್.ಗವಿಮಠಅವರನ್ನು ಸ್ವಗೃಹದಲ್ಲಿ ಬೆಳಗಾವಿಯ ಹಿರಿಯ ಸಾಹಿತಿಗಳಾದ ಡಾ.ಬಸವರಾಜ ಜಗಜಂಪಿ, ಪ್ರೊ.ಎಂ.ಎಸ್. ಇಂಚಲ, ಡಾ.ಎಫ್.ವ್ಹಿ.ಮಾನ್ವಿ, ಏಣಗಿ ಸುಭಾಷ, ಬಸವರಾಜ ಗಾರ್ಗಿ, ಡಾ.ಮಹೇಶ ಗುರನಗೌಡರ ಅವರು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಪ್ರೊ.ಬಿ.ಎಸ್.ಗವಿಮಠ ಅನಿರೀಕ್ಷಿತವಾಗಿಲಭಿಸಿದ



ಪ್ರಶಸ್ತಿ ನನ್ನ ಜವಾಬ್ದಾರಿಯನ್ನು ಇನ್ನಷ್ಟು ಹೆಚ್ಚಿಸಿದೆ. ನನ್ನ ಸುಮಾರು 55ವರ್ಷಗಳ ಕನ್ನಡ ಸೇವೆಯನ್ನು ಮೆಲುಕು ಹಾಕುವಂತೆ ಮಾಡಿದೆ ಎಂದರು. 50ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿ ಗಡಿಸೇವೆ ಮಾಡಲು ಕನ್ನಡಾಂಬೆಯು ಪ್ರೇರಣೆ ನೀಡಿದಳು. ಈ ಪ್ರಶಸ್ತಿ ಮನಸ್ಸಿಗೆ ಸಂತಸ ತಂದಿದೆ ಎಂದು ಅವರು ಹರ್ಷವ್ಯಕ್ತಪಡಿಸಿದರು.

# ತೆಪ್ಪ ಮಗುಚಿಬಿದ್ದು ಮೀನುಗಾರ ಸಾವು

ದಾವಣಗೆರೆ: ಕೆರೆಯಲ್ಲಿ ಮೀನು ಹಿಡಿಯಲು ಹೋಗಿದ್ದ ವ್ಯಕ್ತಿ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ ಘಟನೆ ದಾವಣಗೆರೆಜಿಲ್ಲೆಯ ಜಗಳೂರು ತಾಲೂಕಿನ ತುಪ್ಪದಹಳ್ಳಿ ಗ್ರಾಮದಲ್ಲಿ ನಡೆದಿದೆ.

ಕಿತ್ತೂರು ಗ್ರಾಮದ ನಿವಾಸಿ ಮೂರ್ತಿ (40) ಮೃತ ದುರ್ದೈವಿ. ಮೂರ್ತಿ ನಿತ್ಯ ಮೀನು ಹಿಡಿದು ಮಾರಾಟ ಮಾಡಿ ಜೀವನ ಸಾಗಿಸುತ್ತಿದ್ದರು. ಅದೇ ರೀತಿ ಎಂದಿನಂತೆ ಮೂರ್ತಿ ಮೀನು ಹಿಡಿಯಲು ತೆಪ್ಪದಲ್ಲಿ ಹೋಗಿದ್ದರು. ಈ ವೇಳೆ ಇದ್ದಕ್ಕಿದ್ದಂತೆ ತೆಪ್ಪ ಮಗುಚಿ ಬಿದ್ದು ಮೀನಿಗೆ ಹಾಕಿದ್ದ ಬಲೆ ಕಾಲಿಗೆ ಸಿಲುಕಿ ಸಾವನ್ನಪ್ಪಿದ್ದಾರೆ.

ಮೀನಿನ ಬಲೆ ಕಾಲಿಗೆ ಸಿಲುಕಿದ



ಹಿನ್ನೆಲೆ ಮೂರ್ತಿ ನೀರಿನಲ್ಲಿ ಮುಳುಗಿ ಕೊನೆಯುಸಿರೆಳೆದಿದ್ದಾರೆ. ಸ್ಥಳೀಯರು ಮೂರ್ತಿ ಅವರ ಮೃತದೇಹವನ್ನು ಹೊರತೆಗೆದಿದ್ದಾರೆ. ಸ್ಥಳಕ್ಕೆ ಬಿಳಚೋಡು ಠಾಣಾ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಮಾ. 16 ರಂದು ಲೋಕ ಅದಾಲತ

ಬೆಳಗಾವಿ: ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಧಿಕಾರ ನಿರ್ದೇಶನ ಮೇರಿಗೆ ಮಾ.9 ರಂದು ನಡೆಯಬೇಕಿದ ಲೋಕ ಅದಾಲತನ್ನು ಮಾ.16ಕ್ಕೆ ಮುಂದುಡಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರ, ಹಿರಿಯ ಸಿವಿಲ್ ನ್ಯಾಯಾಧೀಶರು, ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾ.11 ರಂದು ತ್ರೈಮಾಸಿಕ ಸಭೆ

ಬೆಳಗಾವಿ: 2023-24 ನೇ ಸಾಲಿನ ಜಿಲ್ಲಾ ಅಭಿವೃದ್ಧಿ ಸಮಸ್ವಯ ಮತ್ತು ಉಸ್ತುವಾರಿ ಸಮಿತಿಯ ತ್ರೈಮಾಸಿಕ ಸಭೆಯು ಮಾ.11 ರಂದು ಬೆಳಗ್ಗೆ 11 ಗಂಟೆಗೆ ಹಳೆ ಜಿಲ್ಲಾ ಪಂಚಾಯತ ಸಭಾಂಗಣ ಬೆಳಗಾವಿಯಲ್ಲಿ ಮಂಗಲ ಸುರೇಶ ಅಂಗಡಿ, ಲೋಕಸಭಾ ಸದಸ್ಯರು ಹಾಗೂ ಅಧ್ಯಕ್ಷರು ಬೆಳಗಾವಿ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ದಿಶಾ) ಅವರ ಅಧ್ಯಕ್ಷತೆಯಲ್ಲಿ ಆಯೋಜಿಸಲಾಗಿದೆ.

# ಬೆಳಗಾವಿಯ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯ ವಿದ್ಯಾರ್ಥಿಗಳ ಸಾಧನೆಗೆ ಪ್ರಾಂಶುಪಾಲರಿಂದ ಅಭಿನಂದನೆ




ಬೆಳಗಾವಿ: ಪಾಂಡಿಚೆರಿಯ ಮನುಕುಲ ವಿನಯಾಗರ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಫೆ.28 ರಂದು ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ಪ್ರಾಜೆಕ್ಟ್ ಸ್ಪರ್ಧೆ ಏರ್ಪಡಿಸಲಾಗಿತ್ತು.

ಬೆಳಗಾವಿ ನಗರದ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯ ಪ್ರಸಕ್ತ ಸಾಲಿನ ಯಾತ್ರಿಂಕ ವಿಭಾಗದ ಅಂತಿಮ ವರ್ಷದ ವಿದ್ಯಾರ್ಥಿಗಳಾದ ರೋಹನ ಗಸ್ತಿ, ಕಾರ್ತಿಕ ತಾರಿಹಾಳ, ಸಿದ್ದಾರ್ಥ ಕಾಮ್ಕರ ಇವರು Automatic filling and capping M/C ವಸ್ತು ಪ್ರದರ್ಶನ ಸ್ಪರ್ಧೆಯಲ್ಲಿ ಸಮಾಧಾನಕರ ಬಹುಮಾನ ಪಡೆದಿರುತ್ತಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಪ್ರಾಂಶುಪಾಲರಾದ ವಾಸುದೇವ ಅಪ್ಪಾಜಿಗೋಳ ಹಾಗೂ ಯಾಂತ್ರಿಕ ವಿಭಾಗದ ಮುಖ್ಯಸ್ಥರಾದ ಗಂಗಾಧರ ಹುನಗುಂದ ಅವರು ವಿದ್ಯಾರ್ಥಿಗಳಿಗೆ ಹಾಗೂ ಮಾರ್ಗದರ್ಶಕರಾದ ಲಿಂಗರಾಜ ಶಾಮನೂರ ಹಾಗೂ ಶಿವಲಿಂಗ ಮೂಕನವರ ಅವರನ್ನು ಅಭಿನಂದಿಸಿದರು.

# ಅಂತರರಾಷ್ಟ್ರೀಯ ಮಹಿಳಾ ದಿನ ನಿಮಿತ್ತ ವಿಶೇಷ ಕಾರ್ಯಕ್ರಮ

## 'ಸಿಹಿ – ಕಹಿ ನೆನಪು ಸಾವಿರ ನೆನಪು' ಕಾರ್ಯಕ್ರಮ



ಬೆಳಗಾವಿ: ನಗರದ ಹಾಸ್ಯಕೂಟ ಮತ್ತು ಕನ್ನಡ ಸಾಹಿತ್ಯ ಭವನ ವಿಶ್ವಸ್ತ ಮಂಡಳಿ ಸಂಯುಕ್ತ ಆಶ್ರಯದಲ್ಲಿ ಇದೇ ದಿ. 9 ಶನಿವಾರದಂದು ಸಾಯಂಕಾಲ 4-30 ಕ್ಕೆ ಚೆನ್ನಮ್ಮ ವೃತ್ತದ ಬಳಿಯಿರುವ ಕನ್ನಡ ಸಾಹಿತ್ಯ ಭವನದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನ ನಿಮಿತ್ತ ವಿಶೇಷ ಕಾರ್ಯಕ್ರಮ 'ಸಿಹಿ – ಕಹಿ ನೆನಪು ಸಾವಿರ ನೆನಪು' ಎಂಬ ವಿನೂತನ ಕಾರ್ಯಕ್ರಮವನ್ನು ಹಮ್ಮಿಕ್ಕೊಂಡಿದ್ದಾರೆ.

ಅಧ್ಯಕ್ಷತೆಯನ್ನು ಹಿರಿಯ ಲೇಖಕಿ ಶ್ರೀಮತಿ ನೀಲಗಂಗಾ ಚರಂತಿಮಠ ವಹಿಸಿಕೊಳ್ಳಲಿದ್ದು ಶ್ರೀಮತಿ ರಾಜೇಶ್ವರಿ ಹಿರೇಮಠ ಅವರು ನಡೆಯಿಸಿ ಕೊಡಲಿದ್ದಾರೆ.

ಶ್ರೀಮತಿ ಸುನಿತಾ ದೇಸಾಯಿ, ಶ್ರೀಮತಿ ಕೀರ್ತಿ ಕಾಸರಗೋಡ, ಶ್ರೀಮತಿ ಸುಪ್ರಿಯಾ ದೇಶಪಾಂಡೆ, ಶ್ರೀಮತಿ ದೀಪಿಕಾ ಕುಲಕರ್ಣಿ, ಶ್ರೀಮತಿ ಭಾರತಿ ವಡವಿ, ತಮ್ಮ ಸಿಹಿ ಕಹಿ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ. ಬಿ.ಎಸ್.ಎನ್.ಎಲ್. ನಿವೃತ್ತ ಅಧಿಕಾರಿ ಎಸ್ ವಿ ದೀಕ್ಷಿತ ಇವರು ಪ್ರಾಯೋಜಕತ್ವವನ್ನು ವಹಿಸಿಕೊಂಡಿದ್ದಾರೆ.

# ಗ್ರಾಮ ಆಡಳಿತ ಅಧಿಕಾರಿಗಳಿಗೆ ಅಗತ್ಯ ಸೌಲಭ್ಯ, ಕಚೇರಿ ಮೂಲ ಸೌಕರ್ಯ ಪೂರೈಸಲು ಕ್ರಮ

## ಗ್ಯಾರಂಟಿ ಸೇರಿ ಎಲ್ಲ ಸರಕಾರಿ ಯೋಜನೆಗಳು ಅರ್ಹರಿಗೆ ವಿಳಂಬವಿಲ್ಲದೆ ತಲುಪಿಸಿ: ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ

ಧಾರವಾಡ: ಜಿಲ್ಲೆಯಲ್ಲಿ ಬೀಕರ ಬರಗಾಲದ ಛಾಯೆ ಕಾಣಿಸುತ್ತಿದ್ದು, ಗ್ರಾಮಮಟ್ಟದಲ್ಲಿ ಜಿಲ್ಲಾಡಳಿತ ಮತ್ತು ಸರಕಾರದ ಪ್ರತಿನಿಧಿಯಾಗಿ ಗ್ರಾಮ ಆಡಳಿತ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸರಕಾರದ ಗ್ಯಾರಂಟಿ ಯೋಜನೆಗಳು ಸೇರಿದಂತೆ ಎಲ್ಲ ಜನಪರ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ಪ್ರಮಾಣಿಕವಾಗಿ ತಲುಪಿಸಬೇಕೆಂದು ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಅವರು ಹೇಳಿದರು.

ಧಾರವಾಡ ತಹಸಿಲ್ದಾರ ಕಚೇರಿ ಆವರಣದಲ್ಲಿ ಧಾರವಾಡ ಶಹರ ಗ್ರಾಮ ಆಡಳಿತ ಅಧಿಕಾರಿಗಳ ನೂತನ ಕಚೇರಿ ಕಟ್ಟಡ ಉದ್ಘಾಟಿಸಿ, ಮಾತನಾಡಿದರು.

ಗ್ರಾಮ ಆಡಳಿತ ಅಧಿಕಾರಿಗಳಿಗೆ ಕೆಲಸ ಒತ್ತಡ ಇರುವುದು ನಿಜ. ಆದರೆ ಜನಸಾಮಾನ್ಯರ ಬೇಡಿಕೆಗಳು ಹೆಚ್ಚಾಗಿರುವದರಿಂದ ನಿರೀಕ್ಷೆಗೆ ತಕ್ಕಂತೆ ಆಡಳಿತ ಯಂತ್ರ ಕ್ರಿಯಾಶೀಲವಾಗಬೇಕು. ಗ್ರಾಮ ಆಡಳಿತ ಅಧಿಕಾರಿಗಳಿಗೆ ಅಗತ್ಯವಿರುವ ಕಚೇರಿ ಹಾಗೂ ಇತರ ತಾಂತ್ರಿಕ ಅನುಕೂಲಗಳನ್ನು ಶಾಸಕರ



ಕ್ಷೇತ್ರಾಭಿವೃದ್ಧಿ ನಿಧಿ ಹಾಗೂ ಕಂದಾಯ ಇಲಾಖೆಯಿಂದ ಕಲ್ಪಿಸಲಾಗುತ್ತದೆ. ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳಿಗೆ ಸರಕಾರ ಸಕಾರಾತ್ಮಕವಾಗಿ ಸ್ಪಂದಿಸಲಿದೆ ಎಂದು ಸಚಿವರು ತಿಳಿಸಿದರು.

ಜಿಲ್ಲೆಯಲ್ಲಿ ಬರ ಪರಿಸ್ಥಿತಿಯನ್ನು ಎಲ್ಲರೂ ಸೇರಿ ಸಮರ್ಥವಾಗಿ ಎದುರಿಸಬೇಕು.ಎಲ್ಲ ಗ್ರಾಮ ಮಟ್ಟದ ಹಾಗೂ ತಾಲೂಕುಮಟ್ಟದ ಅಧಿಕಾರಿಗಳು ತಮ್ಮ ಕಾರ್ಯಸ್ಥಳದಲ್ಲಿದ್ದು, ಜಿಲ್ಲಾಧಿಕಾರಿಗಳಿಗೆ, ತಹಸಿಲ್ದಾರರಿಗೆ ವಾಸ್ತವಿಕ ವರದಿ ನೀಡಬೇಕು. ಕುಡಿಯುವ ನೀರು, ಮೇವಿನ ಸಮಸ್ಯೆ ಕಂಡುಬಂದಲ್ಲಿ ತಕ್ಷಣ ಸ್ಪಂದಿಸಿ, ಪರಿಹರಿಸಬೇಕು ಎಂದು ಸಚಿವರು ಹೇಳಿದರು.

ಲೋಕಸಭೆ ಚುನಾವಣೆ ನಂತರ ತಹಶಿಲ್ದಾರ ಕಚೇರಿ ಕಟ್ಟಡದ ದುರಸ್ತಿ ಬಗ್ಗೆ ಕ್ರಮವಹಿಸಲಾಗುವುದು ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಭಾಗವಹಿಸಿದ್ದರು. ಸಚಿವರು ಮತ್ತು ಜಿಲ್ಲಾಧಿಕಾರಿಗಳು ಧಾರವಾಡ ತಾಲೂಕಿನ ಗ್ರಾಮ ಆಡಳಿತ ಅಧಿಕಾರಿಗಳಿಗೆ ನೀಡುವ ಸ್ಟೇಷನರಿ ಕಿಟ್ಟ್‌ಗಳನ್ನು ಕೆಲವು ಗ್ರಾಮ ಆಡಳಿತ ಅಧಿಕಾರಿಗಳಿಗೆ ಸಾಂಕೇತಿಕವಾಗಿ ವಿತರಿಸಿದರು.

ಕಾರ್ಯಕ್ರಮದಲ್ಲಿ ಸಚಿವರಿಗೆ ಗ್ರಾಮ ಆಡಳಿತ ಅಧಿಕಾರಿಗಳ ಸಂಘದಿಂದ 7ನೇ ವೇತನ ಆಯೋಗ ಜಾರಿ, ಓಪಿಸ್ ಜಾರಿ, ಲ್ಯಾಪಟಾಪ್, ರಿಸ್ಕ್ ಅಲೌನ್ಸ್, ಪ್ರಯಾಣ ಬತ್ಯೆ ಹೆಚ್ಚಳ, ಸೇವಾಭದ್ರತೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಮನವಿಪತ್ರ ಸಲ್ಲಿಸಲಾಯಿತು.

ತಹಸಿಲ್ದಾರ ಡಾ.ಡಿ.ಎಚ್.ಹೂಗಾರ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾಮ ಆಡಳಿತ ಅಧಿಕಾರಿಗಳ ಧಾರವಾಡ ತಾಲೂಕು ಅಧ್ಯಕ್ಷ ವೆಂಕಟೇಶ ಹಟ್ಟಿಯವರ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ, ಗ್ರೇಡ್ 2 ತಹಸಿಲ್ದಾರ ಹಣಮಂತ ಕೋಚ್ಚರಗಿ, ಉಪ ತಹಸಿಲ್ದಾರರಾದ ಎ.ಎಂ. ಮಂಗಳಗಟ್ಟಿ, ಎಸ್.ಸಿ.ಕುಲಕರ್ಣಿ, ಧಾರವಾಡ ತಹಶಿಲ್ದಾರ ಕಚೇರಿಯ ಶಿರಸ್ತೆದಾರರಾದ ರಮೇಶ ಬಂಡಿ, ಎಂ.ವಿ.ಮುರಗೋಡ, ವಿ.ಎಂ. ತಿತ್ತಿ, ವಿದ್ಯಾ ಡಿಸ್ಲೆ ಮತ್ತು ಕಂದಾಯ ನಿರೀಕ್ಷಕರಾದ ಗುರು ಸುಣಗಾರ, ಅಮರಗೋಳ, ಸಂಪತ್ತಕುಮಾರ ವಡೆಯರ ಹಾಗೂ ತಾಲೂಕಿನ ಎಲ್ಲ ಗ್ರಾಮ ಆಡಳಿತ ಅಧಿಕಾರಿಗಳು, ಗ್ರಾಮ ಸಹಾಯಕರು, ತಹಶಿಲ್ದಾರ ಕಚೇರಿ ಸಿಬ್ಬಂದಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ಮಾ. 12ರಂದು ಪಾಪ್ಯುಲರ್ ವೆಹಿಕಲ್ಸ್ ಅಂಡ್ ಸರ್ವೀಸಸ್ ಐಪಿಒ ಮಾರಾಟ

ಹುಬ್ಬಳ್ಳಿ: ಪಾಪ್ಯುಲರ್ ವೆಹಿಕಲ್ಸ್ ಅಂಡ್ ಸರ್ವೀಸಸ್ ಲಿಮಿಟೆಡ್(ಪಿವಿಎಸ್‌ಎಲ್) ಆರಂಭಿಕ ಷೇರು ಬಿಡುಗಡೆ ಅಥವಾ ಮಾರಾಟ ಸಂಬಂಧ 2024 ಮಾರ್ಚ್ 12 ರಂದು ಈಕ್ವಿಟಿ ಷೇರುಗಳ ಮಾರಾಟ ಆರಂಭಿಸಲಿದೆ.

ಆರಂಭಿಕ ಷೇರು ಮಾರಾಟದ ಒಟ್ಟು ಗಾತ್ರದಲ್ಲಿ ಕಂಪನಿಯು 250 ಕೋಟಿ ರೂ.ಮೊತ್ತದ 1,19,17,075 ಈಕ್ವಿಟಿ ಷೇರುಗಳ ಮಾರಾಟ ನಡೆಸಲಿದೆ. ಈ ಹರಾಜು ಪ್ರಕ್ರಿಯೆಯಲ್ಲಿ ಪ್ರತಿ ಷೇರಿಗೆ 280 ರೂ.ನಿಂದ 295 ರೂ.ವರೆಗೆ ದರ ನಿಗದಿಪಡಿಸಲಾಗಿದೆ. ಸಾರ್ವಜನಿಕರು ಕನಿಷ್ಠ 50 ಈಕ್ವಿಟಿ ಷೇರುಗಳು ಮತ್ತು ತದನಂತರದಲ್ಲಿ 50 ಈಕ್ವಿಟಿ ಷೇರುಗಳ ಗುಣಕದಲ್ಲಿ ಷೇರುಗಳ ಖರೀದಿ




ನಡೆಸಬಹುದು.

ಚಂದಾದಾರಿಕೆಗಾಗಿ ಹರಾಜು/ಮಾರಾಟ ಕೊಡುಗೆ 2024 ಮಾರ್ಚ್ 12ರಂದು ತೆರೆಯಲಿದ್ದು, 2024 ಮಾರ್ಚ್ 14ರಂದು ಮುಕ್ತಾಯ ಕಾಣಲಿದೆ. ಆರಂಭಿರ ಷೇರು ಬಿಡುಗಡೆ ಅಥವಾ ಐಪಿಒದಿಂದ ಬರುವ ನಿವ್ವಳ ಆದಾಯವನ್ನು ಕಂಪನಿ ಮತ್ತು ಅದರ ಅಂಗಸಂಸ್ಥೆಗಳು ಪಡೆದಿರುವ ಕೆಲವು ಸಾಲಗಳ ಪೂರ್ಣ ಅಥವಾ ಭಾಗಶಃ ಮರುಪಾವತಿ ಮತ್ತು ಅಥವಾ ಪೂರ್ವಪಾವತಿಗೆ ಬಳಸಿಕೊಳ್ಳಲು ಕಂಪನಿ ಪ್ರಸ್ತಾಪಿಸಿದೆ. ಕಂಪನಿಯ ಅಂಗಸಂಸ್ಥೆಗಳೆಂದರೆ, **PAWL, PM-MIL, KGPL, KCPL** ಮತ್ತು **PMPL** ಮಾಡಿರುವ ಸಾಲ ತೀರಿಸಲು 1,920 ದಶಲಕ್ಷ ರೂಪಾಯಿ ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಐಪಿಒದ ಬಾಕಿ ಮೊತ್ತ ಬಳಸಿಕೊಳ್ಳಲು ಕಂಪನಿ ಉದ್ದೇಶಿಸಿದೆ.

ಪಾಪ್ಯುಲರ್ ವೆಹಿಕಲ್ಸ್ ಅಂಡ್ ಸರ್ವೀಸಸ್ ಲಿಮಿಟೆಡ್ ಕಂಪನಿಯು ಮಾರಾಟ ಕೊಡುಗೆ ಮೂಲಕ "ಬನ್ಯಾನ್ ಟ್ರೀ ಗ್ರೋಥ್ ಕ್ಯಾಪಿಟಲ್ 2, ಎಲ್-ಎಲ್‌ಸಿ" ಕಂಪನಿಗೆ 1,19,17,075 ಈಕ್ವಿಟಿ ಷೇರುಗಳನ್ನು ಮಾರಾಟ ಮಾಡಲಿದೆ.

ಕೇರಳದ ಎರ್ನಾಕುಲಂನಲ್ಲಿ ಇರುವ ಕಂಪನಿಗಳ ರಿಜಿಸ್ಟ್ರಾರ್ ಆಫ್ ಕಂಪನೀಸ್ ಗೆ 2024 ಮಾರ್ಚ್ 4ರಂದು ಸಲ್ಲಿಸಲಾಗಿರುವ ಕಂಪನಿಯ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ಈಕ್ವಿಟಿ ಷೇರುಗಳ ಮಾರಾಟ ಮಾಡಲಾಗುತ್ತದೆ. ಬಿಎಸ್‌ಇ ಮತ್ತು ಎನ್‌ಎಸ್‌ಇ ಐಪಿಒ ಬಿಡುಗಡೆ ಪ್ರಕ್ರಿಯೆಯನ್ನು ನೋಂದಾಯಿಸಲು ಕಂಪನಿ ಉದ್ದೇಶಿಸಿದೆ.

ಆರಂಭಿಕ ಷೇರು ಬಿಡುಗಡೆ ಅಥವಾ ಷೇರುಗಳ ಮಾರಾಟಕ್ಕಾಗಿ ನ್ಯಾಷನಲ್ ಸ್ಟಾಕ್ ಎಕ್ಸ್ ಚೇಂಜ್ ಆಫ್ ಇಂಡಿಯಾವು ನಿಯೋಜಿತ ಷೇರು ವಿನಿಮಯ ಕೇಂದ್ರವಾಗಿದೆ. ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್, ನುವಾಮಾ ವೆಲ್ತ್ ಮ್ಯಾನೇಜ್‌ಮೆಂಟ್ ಲಿಮಿಟೆಡ್ ಮತ್ತು ಸೆಂಟ್ರಮ್ ಕ್ಯಾಪಿಟಲ್ ಲಿಮಿಟೆಡ್ ಈ ಮಾರಾಟ ಕೊಡುಗೆಯ ಲೆಕ್ಕಪತ್ರ ನಿರ್ವಹಿಸುವ ಲೀಡ್ ಮ್ಯಾನೇಜರ್‌ಗಳಾಗಿವೆ.

# ಕೆಎಲ್‌ಇ ಸಂಸ್ಥೆಯ ಸ್ವ ಶಕ್ತಿ ಮಹಿಳಾ ಸಬಲೀಕರಣದಿಂದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ

ಬೆಳಗಾವಿ: ಸಮಾಜದಲ್ಲಿ ಮೂಡನಂಬಿಕೆ ಹಾಸುಹೊಕ್ಕಾಗಿರುವದರಿಂದ ದೇವದಾಸಿಯಂತ ಪದ್ದತಿ ಇನ್ನೂ ಜೀವಂತವಿದೆ. ಅದನ್ನು ಬೇರು ಸಮೇತ ಕಿತ್ತು ಹಾಕಲು ಮೊದಲು ಸಂಘಟಿತರಾಗಬೇಕು. ಅದಕ್ಕೆ ಮುಖ್ಯವಾಗಿರಬೇಕಾಗಿದ್ದು ಶಿಕ್ಷಣ. ಗ್ರಾಮಿಣ ಪ್ರದೇಶದಲ್ಲಿ ಇನ್ನೂ ಹೆಣ್ಣುಮಕ್ಕಳು ಶಿಕ್ಷಣದಿಂದ ವಂಚಿತರಾಗುತ್ತಿದ್ದು, ಅವರಿಗೆ ಸರಿಯಾದ ಮಾರ್ಗದರ್ಶನ ನೀಡಿ ಸುಶಿಕ್ಷಿತರನ್ನಾಗಿಸುವ ಕಾರ್ಯ ಮಾಡಬೇಕಾಗಿದೆ ಎಂದು ಮೂಡಲಗಿಯ ಅಮ್ಮ ಸಂಸ್ಥೆಯ ಸಂಸ್ಥಾಪಕಿ ಶೋಭಾ ಗಸ್ತಿ ಅವರಿಂದಿಲ್ಲಿ ಹೇಳಿದರು.

ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಕೆಎಲ್‌ಇ ಸಂಸ್ಥೆಯ ಸ್ವ ಶಕ್ತಿ ಮಹಿಳಾ ಸಬಲೀಕರಣ ಘಟಕವು ಏರ್ಪಡಿಸಿದ್ದ ಮಹಿಳಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಸಾಂಪ್ರದಾಯಿಕ ನಂಬಿಕೆಗಳನ್ನು ವಿರೋಧಿಸುವ ಗುಣಗಳನ್ನು ಬೆಳೆಸಿಕೊಂಡು ತನ್ನದೇ ಆದ ಮಾರ್ಗವನ್ನು ಕಂಡುಕೊಳ್ಳಬೇಕು. ಸಮಾಜದ ಮೇಲೆ ಪರಿಣಾಮ ಬೀರುವ ಮೂಡನಂಬಿಕೆಗಳಿಗೆ ಜೋತು ಬೀಳದೇ ಸುಶಿಕ್ಷಿತರಾಗಬೇಕು ಎಂದು ಕರೆ ನೀಡಿದ ಅವರು, 6ನೇ ತರಗತಿಯಲ್ಲಿ ಓದುತ್ತಿರುವಾಗಲೇ ದೇವರ ಹೆಸರಿನಲ್ಲಿ ಮುತ್ತು ಕಟ್ಟಿ ಅವರನ್ನು ಅಂಧಕಾರಕ್ಕೆ ತಳ್ಳಿರುವ ದುಃಖವನ್ನು ತೋಡಿಕೊಂಡರು. 1997 ರಲ್ಲಿ ಮಹಿಳಾ ಅಭಿವೃದ್ಧಿ ಮತ್ತು ಸಂರಕ್ಷಣಾ



ಸಂಸ್ಥೆ ಪ್ರಾರಂಭಿಸಿ, ಕರ್ನಾಟಕದಾದ್ಯಂತ 360 ಹಳ್ಳಿಗಳಿಂದ 3,600 ಕ್ಕೂ ಅಧಿಕ ಮಕ್ಕಳನ್ನು ರಕ್ಷಿಸಲಾಗಿದೆ. 200ಕ್ಕೂ ಹೆಚ್ಚು ಹೆಣ್ಣು ಮಕ್ಕಳನ್ನು ಒಂದೇ ವರ್ಷದಲ್ಲಿ ಮರಳಿ ಶಾಲೆಗೆ ಕಳುಹಿಸುವ ಕಾರ್ಯ ಮಾಡಲಾಗಿದೆ ಎಂದು ತಿಳಿಸಿದರು.

ಪಂಖ ಇಂಡಿಯಾ ಫಂಡೇಶನ್ ಹಾಗೂ ಪಂಖ ಹ್ಯಾಂಡಿಕ್ರಾಫ್ಟನ ಸಿಇಒ ಗೌರಿ ಮಾಂಜರೇಕರ ಅವರು ಮಾತನಾಡಿ, ಸಮಾಜದಲ್ಲಿ ಲಿಂಗ ಸಮಾನತೆ ಬರಬೇಕು. ಸ್ತ್ರೀ ಶಿಕ್ಷಣಕ್ಕೆ ಹಚ್ಚು ಪ್ರಾಮುಖ್ಯತೆ ನೀಡಿದಾಗ ಮಹಿಳೆ ಸಬಲಳಾಗುತ್ತಾಳೆ. ಆದರೆ ಗ್ರಾಮೀಣ ಪ್ರದೇಶದಲ್ಲಿ ಮಹಿಳಾ ಶಿಕ್ಷಣಕ್ಕೆ ಪ್ರಾಧಾನ್ಯತೆ ನೀಡದೇ ಅರ್ಧಕ್ಕೆ ಮೊಟಕುಗೊಳಿಸಲಾಗುತ್ತಿದೆ. ಆದ್ದರಿಂದ ಗ್ರಾಮೀಣ ಸ್ತ್ರೀಯರ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಶಿಕ್ಷಣದ ಜೊತೆಗೆ ಅವರಿಗೆ ವೃತ್ತಿಪರ ತರಬೇತಿ ನೀಡಿ ಆರ್ಥಿಕ ಮತ್ತು ಸಾಮಾಜಿಕವಾಗಿ ಪ್ರಭಾವಶಾಲಿಗಳನ್ನಾಗಿ ಮಾಡಬೇಕು ಎಂದು ಸಲಹೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಲಿಂಗಬೇಧ ತಾರತಮ್ಯ ಅಧಿಕಗೊಳ್ಳುತ್ತಿದೆ. ಅದು ತಪ್ಪಬೇಕಾದರೆ ಸುಶಿಕ್ಷಿತ ಸಮಾಜ ನಿರ್ಮಾಣ ಮಾಡಬೇಕಾಗಿದೆ. ಹೆಣ್ಣು ಮನೆಯ ಬೆಳಕು ಎಂಬುದನ್ನು ಅರಿತುಕೊಳ್ಳಬೇಕು. ಸ್ತ್ರೀ ಇಲ್ಲದ ಸಮಾಜವನ್ನು ಊಹಿಸಿಕೊಳ್ಳುವದು ಅಸಾಧ್ಯ ಎಂದ ಅವರು, ಪಂಖ ಮೂಲಕ ಕರಕುಶಲ ವೃತ್ತಿಪರ ತರಬೇತಿಯನ್ನು ನೀಡಿ ವಿಭಿನ್ನವಾಗಿ ಯೋಚಿಸುವ ಕಾರ್ಯವಿಧಾನಗಳನ್ನು ತಿಳಿಸಿಕೊಡಲಾಗುತ್ತಿದೆ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಕೆಎಲ್‌ಇ ಸ್ತ್ರೀಶಕ್ತಿ ಸಂಘದ ಉಪಾಧ್ಯಕ್ಷೆ ಡಾ. ಅಲ್ಕಾ ಕಾಳೆ ಅವರು ವಹಿಸಿದ್ದರು. ಸಮಾರಂಭದಲ್ಲಿ ಡಾ. ಆರತಿ ಮಹಿಶ್ಯಾಳೆ, ಡಾ. ಹರಪ್ರೀತ ಕೌರ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089